ಸಂಪುಟ : 8 ಸಂಚಿಕೆ : 282 ಪುಟ : 4 ಬೆಲೆ : 3.00 ಬುಧವಾರ ಡಿಸೆಂಬರ್ 20, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 282 Pages : 4 Price : 3.00 Wednesday December 20, 2023 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಡಿ. 20 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 1 ಎಸ್ ಎಂ ಕೃಷ್ಣ ನಗರ, ವಾರ್ಡ್ ನಂ. 26ರಲ್ಲಿ ಕೃಷ್ಣಾ ಟಾಕೀಜ್ ಕಲಾಮಂದಿರ ರೋಡ್, ಅಕ್ಕನ ಬಳಗ, ಅಂಗಡಿಯವರ ಲೈನ್, ಜೆ.ಟಿ.ಮಠದ ರಸ್ತೆ, ಬಂಗಾರಶೆಟ್ಟರ ಲೈನ್, ಡವಳೆಯವರ ಲೈನ್, ಮಾಳೆಕೊಪ್ಪಮಠ ಸಂಧಿ, ವಾರ್ಡ್ ನಂ. 15,16,17ರಲ್ಲಿ ಶಹಪೂರಪೇಟೆ, ಡಿ.ಸಿ.ಮಿಲ್, ರಸ್ತೆ, ಜವಳಗಲ್ಲಿ, ವಾರ್ಡ್ ನಂ. 27ರಲ್ಲಿ ವೀರನಾರಾಯಣ ಬಡಾವಣೆ, ಕೆ.ಎಚ್.ಪಾಟೀಲ ಬಡಾವಣೆ, ವಾರ್ಡ್ ನಂ. 16,18,19ರಲ್ಲಿ ಮಡಿವಾಳರ ದೇವಸ್ಥಾನ ಲೈನ್, ಕುಂಬಾರ ಓಣಿ ಲೈನ್, ಬಾಗಲಕೋಟಿಯವರ ಲೈನ್, ಅಂಬೇಡ್ಕರ ನಗರ, ಡೋರಗಲ್ಲಿ, ಕೊನೇರಿ ಹೊಂಡ ಲೈನ್, ಹನಮಂತದೇವರ ಗುಡಿ ಲೈನ್,

ವಾರ್ಡ್ ನಂ. 29ರಲ್ಲಿ ಭಾಂಡಗೆಯವರ ಲೈನ್, ಗುಂಪಿನಮನಿ, ಪೊಲೀಸ್ ಸ್ಟೇಷನ್ ಕೆಳಗಿನ ಭಾಗ, ಮಸೂತಿ ಲೈನ್, ಗಾರ್ಡನ್ ಲೈನ್ ಕಲಾಮಂದಿರ ರಸ್ತೆ, ವಾರ್ಡ್ ನಂ. 22ರಲ್ಲಿ ವಿಜಯನಗರ ಭಾಗಗಳು, ವಾಲ್ಮೀಕಿ ಭವನ, ಟವರ್ ಕಂಬ, ಕಮತರ ಪ್ಲಾಟ್, ಶಿಗ್ಗಾಂವಿ ಪ್ಲಾಟ್, ಕರುಗಲ್ಲ್ ಲೇಔಟ್.

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಬಾಕಿ ಕರವನ್ನು ಸಂದಾಯ ಮಾಡುವಂತೆ ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಗದಗ, ಗಜೇಂದ್ರಗಡ, ಲಕ್ಷ್ಮೇಶ್ವರ, ಮುಂಡರಗಿ, ನರಗುಂದ, ರೋಣ ತಾಲೂಕುಗಳಲ್ಲಿ ಖಾಲಿ ಇರುವ ಕರ್ನಾಟಕ ಒನ್ ಕೇಂದ್ರಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು https://www.karnatakaone.gov.in/Public/FranchiseeTerms ನಲ್ಲಿ ಆನ್‌ಲೈನ್ ಮೂಲಕ ಮಾತ್ರ ಜನವರಿ 2ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಂಪನ್ಮೂಲ ವ್ಯಕ್ತಿಗಳಿಗೆ ಸಶಕ್ತೀಕರಣ ತರಬೇತಿ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

# ಸಂವಿಧಾನದ ಮೂಲ ಆಶಯ ಸಾಕಾರಗೊಳ್ಳಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ನೇತೃತ್ವದಲ್ಲಿ ರಚನೆಗೊಂಡ ಭಾರತದ ಸಂವಿಧಾನವು ಅತ್ಯಂತ ಶ್ರೇಷ್ಠ ಸಂವಿಧಾನವಾಗಿದೆ. ಸರ್ವರಿಗೂ ಸಮಾನ ಅವಕಾಶ, ಸ್ಥಾನಮಾನ ನೀಡುವುದು ನಮ್ಮ ಸಂವಿಧಾನದ ಆಶಯ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೆ.ಎಚ್. ಪಾಟೀಲ ಪ್ರತಿಷ್ಠಾನಗಳ ಸಹಯೋಗದಲ್ಲಿ ಹುಲಕೋಟಿಯ ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದಲ್ಲಿ ಮಂಗಳವಾರ ಆಯೋಜಿಸಿದ್ದ ಮೂರು ದಿನಗಳ 'ಸಂಪನ್ಮೂಲ ವ್ಯಕ್ತಿಗಳಿಗೆ ಸಶಕ್ತೀಕರಣ ತರಬೇತಿ' ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಪಾಲ್ಗೊಂಡು ಸಚಿವರು ಮಾತನಾಡಿದರು.

ಗದಗ ಜಿಲ್ಲೆಯ 2.24 ಲಕ್ಷ ಕುಟುಂಬಗಳಿಗೂ ಸಹ ಸಂವಿಧಾನ ಓದಿಸಬೇಕು ಎನ್ನುವ ಗುರಿ ಹೊಂದಲಾಗಿದೆ. ಈಗಾಗಲೇ ಸಶಕ್ತೀಕರಣ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದ್ದು, ಉನ್ನತ ಅಧಿಕಾರ, ಸ್ಥಾನಮಾನದಲ್ಲಿರುವವರು ಸಂವಿಧಾನವನ್ನು ಅಶಕ್ತೀಕರಣಗೊಳಿಸುವುದನ್ನು ಬಿಟ್ಟು ಸಶಕ್ತೀಕರಣಗೊಳಿಸಲು ಮುಂದಾಗಬೇಕು. ಅಧಿಕಾರದಲ್ಲಿರುವವರೆಲ್ಲರೂ ಸಂವಿಧಾನದ ಆಶಯ ಸಾಕಾರವಾಗಿದೆಯೇ ಎಂಬುದನ್ನು ಗಂಭೀರವಾಗಿ ಆತ್ಮಾವಲೋಕನ ಮಾಡಿಕೊಳ್ಳಬೇಕು. ಸಮಾನ ಹಕ್ಕು, ಅವಕಾಶ ಸಂವಿಧಾನದಿಂದ ಸರ್ವರಿಗೂ ತಲುಪಬೇಕು. ಶೋಷಣೆಮುಕ್ತ ಸಮಾಜ ನಿರ್ಮಾಣವಾಗಬೇಕು. ಸಂವಿಧಾನದ ಮೂಲ ಆಶಯ ಸಾಕಾರಗೊಳ್ಳಬೇಕು. ಇದಕ್ಕಾಗಿ ಪ್ರತಿಯೊಬ್ಬರಿಗೂ ಸಂವಿಧಾನದ ಅರಿವು ಮೂಡಿಸಬೇಕಿದೆ ಎಂದು ನುಡಿದರು.



> ಸಂವಿದಾನದ ಪೀಠಿಕೆಯಲ್ಲಿಯೇ ಉಲ್ಲೇಖಿಸಲಾದ 'ಜಾತ್ಯಾತೀತ' ಶಬ್ದದ ಅರ್ಥವನ್ನು ಎಲ್ಲರೂ ಅರಿಯಬೇಕು. ಸಂವಿಧಾನದ ಆಶಯದಂತೆ 'ಸರ್ವರಿಗೂ ಸಮಬಾಳು ಸಮಪಾಲು' ಆಗಬೇಕಿದೆ. ಸರ್ಕಾರದ ಸೌಲಭ್ಯಗಳು ನೇರವಾಗಿ ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಈ ದಿಶೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಜಾರಿಯಾದ ನಂತರ ಗ್ಯಾರಂಟಿ ಯೋಜನೆಗಳ ಸೌಲಭ್ಯವನ್ನು ನೇರವಾಗಿ ಅರ್ಹರ ಖಾತೆಗಳಿಗೆ ಅನುದಾನ ನೀಡುವ ಮೂಲಕ ಜಿಲ್ಲೆಯಲ್ಲಿ ಶೇ.99ರಷ್ಟು ಗುರಿ ಸಾಧನೆಯಾಗಿದೆ. ಇದರಿಂದ ಸರ್ಕಾರದ ಅನುದಾನದ ಅಪವ್ಯಯ ನಿಯಂತ್ರಣವಾಗಿದೆ. ಶಾಂತಿಯುತ ಹಾಗೂ ಭ್ರಾತೃತ್ವ ಭಾವನೆ ಭಾರತೀಯರಾದ ನಮ್ಮೆಲ್ಲರಿಗೂ ಬರಬೇಕು. ಈ ಮೂಲಕ ಸಂವಿಧಾನದ ಸದಾಶಯ ಸಾಕಾರಗೊಳ್ಳಬೇಕು.
>
> – ಎಚ್.ಕೆ. ಪಾಟೀಲ.
> ಕಾನೂನು, ಪ್ರವಾಸೋದ್ಯಮ ಸಚಿವರು.

ನಿವೃತ್ತ ನ್ಯಾಯಮೂರ್ತಿ ನಾಗರಾಜ ಅರಳಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸಂವಿಧಾನ ಸರಿಯಾದ ನಿಟ್ಟಿನಲ್ಲಿ ಸಾಗಬೇಕಾದರೆ ಮತದಾರ ಮೊದಲು ಜಾಗೃತನಾಗಬೇಕು. ಸಂವಿಧಾನ ಪಾಲನೆ ಕುರಿತು ಆತ್ಮಾವಲೋಕನ ಮಾಡಿಕೊಳ್ಳಬೇಕು ಹಾಗೂ ಸಂವಿಧಾನದ ಆಚರಣೆಯಲ್ಲಿ ಎಡವಬಾರದು. ಸಂವಿಧಾನವನ್ನು ಸರಿಯಾದ ರೀತಿಯಲ್ಲಿ ಅರ್ಥೈಸಿಕೊಳ್ಳಬೇಕು. ಸಂವಿಧಾನವನ್ನು ಗೌರವಿಸುವ ಮನೋಭಾವನೆ ನಮ್ಮದಾಗಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ನಾವೆಲ್ಲರೂ ಸಂವಿಧಾನದ ಆಶಯಗಳನ್ನು ಜಾರಿಗೊಳಿಸುವ ಸಂಕಲ್ಪ ಮಾಡೋಣ ಎಂದರು.

### ವ್ಯಾಜ್ಯಮುಕ್ತ ಜಿಲ್ಲೆ

ಗದಗ ಜಿಲ್ಲೆಯನ್ನು ವ್ಯಾಜ್ಯಮುಕ್ತ ಜಿಲ್ಲೆಯಾಗಿಸಬೇಕೆಂದು ಪ್ರಯತ್ನಿಸಲಾಗುತ್ತಿದೆ. ಈಗಾಗಲೇ ಉನ್ನತ ಅಧಿಕಾರಿಗಳೊಂದಿಗೆ ಹಾಗೂ ಸಮಾಜದ ಪ್ರಮುಖರೊಂದಿಗೆ ಚರ್ಚಿಸಲಾಗಿದೆ. ಶೀಘ್ರವೇ ವ್ಯಾಜ್ಯಮುಕ್ತ ಜಿಲ್ಲೆಯಾಗಿಸುವ ಯೋಜನೆಯನ್ನು ಜಾರಿಗೊಳಿಸಲಾಗುವುದು.

ಮೊದಲ ಹಂತದಲ್ಲಿ ನೂರು ಗ್ರಾಮಗಳನ್ನಾದರೂ ವ್ಯಾಜ್ಯಮುಕ್ತ ಗ್ರಾಮಗಳನ್ನಾಗಿ ಮಾಡಬೇಕಿದೆ. ಗ್ರಾಮ ನ್ಯಾಯಾಲಯಗಳನ್ನು ರಚಿಸುವ ಮೂಲಕ ವ್ಯಾಜ್ಯ ಮುಕ್ತ ಗ್ರಾಮಗಳನ್ನಾಗಿಸಲಾಗುವುದು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ನುಡಿದರು.

ರಾಜ್ಯ ವಿಕೇಂದ್ರೀಕರಣ ಅಭಿವೃದ್ಧಿ ಸಮಿತಿ ಸದಸ್ಯ ಪ್ರಮೋದ ಹೆಗಡೆ ಮಾತನಾಡಿ, ಹಳ್ಳಿಗಳಲ್ಲಿಯ ಯುವಕರು ನಗರದೆಡೆ ವಲಸೆ ಹೋದರೆ ಹಳ್ಳಿಗಳ ಸಶಕ್ತೀಕರಣ ಸಾಧ್ಯವೇ ಎಂದು ನಮ್ಮನ್ನು ನಾವೇ ಪ್ರಶ್ನಿಸಿಕೊಳ್ಳಬೇಕು.

▸▸ 3ನೇ ಪುಟಕ್ಕೆ

### ಪ್ರಧಾನಿ ಮೋದಿ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಒತ್ತಾಯ

## ತುರ್ತಾಗಿ ಉನ್ನತ ಮಟ್ಟದ ಸಭೆ ನಡೆಸಿ, ಬರ ಪರಿಹಾರ ಒದಗಿಸಿ



■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಗೃಹ ಸಚಿವ ಅಮಿತ್ ಶಾ ನೇತೃತ್ವದ ಹೈ ಪವರ್ ಸಮಿತಿ ಸಭೆಯನ್ನು ತುರ್ತಾಗಿ ನಡೆಸಿ, ಶೀಘ್ರ ಬರ ಪರಿಹಾರ ಒದಗಿಸಲು ಪ್ರಧಾನಿ ಮೋದಿ ಅವರಿಗೆ ಒತ್ತಾಯಿಸಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಪ್ರಧಾನಿ ಮೋದಿ ಅವರ ಭೇಟಿ ಬಳಿಕ ಮಾಧ್ಯಮದವರ ಜತೆ ಮಾತನಾಡಿ ವಿವರ ನೀಡಿದರು.

ರಾಜ್ಯಕ್ಕೆ ಬರ ಪರಿಹಾರ ಸಿಗಬೇಕು ಎಂದರೆ ಗೃಹ ಸಚಿವ ಅಮಿತ್ ಶಾ ನೇತೃತ್ವದ ಹೈ ಪವರ್ ಸಮಿತಿ ಸಭೆ ನಡೆಯಬೇಕು. ಆದರೆ ನಾವು ಇದುವರೆಗೂ ಮೂರು ಬಾರಿ ಕೇಂದ್ರಕ್ಕೆ ಮನವಿ ಸಲ್ಲಿಸಿದ್ದರೂ ಪ್ರಾಥಮಿಕ ಸಭೆಯನ್ನೇ ನಡೆಸಿಲ್ಲ. ಆದ್ದರಿಂದ ತುರ್ತಾಗಿ ಸಭೆ ನಡೆಸಿ ಶೀಘ್ರ ಬರ ಪರಿಹಾರ ಬಿಡುಗಡೆಗೊಳಿಸಲು ಸೂಚಿಸಬೇಕು ಎಂದು ಪ್ರಧಾನಿ ಅವರಿಗೆ ಮನವಿ ಮಾಡಿದ್ದೇವೆ ಎಂದರು.

ನಾವು ಮುಖ್ಯವಾಗಿ ಐದು ಒತ್ತಾಯಗಳನ್ನು ಮಂಡಸಿ ಮನವಿ ಮಾಡಿದ್ದೇವೆ. ನಮ್ಮ ಮನವಿಯನ್ನು ಸಮಾಧಾನದಿಂದ ಕೇಳಿಸಿಕೊಂಡು ಪ್ರಧಾನಿ ಅವರು ಸ್ಪಂದಿಸಿದ್ದಾರೆ. ಸ್ಪಂದನೆಗೆ ತಕ್ಕಂತೆ ಶೀಘ್ರ ಪರಿಹಾರವನ್ನು ಅವರಿಂದ ನಿರೀಕ್ಷಿಸಿದ್ದೇವೆ ಎಂದರು.

## 92 ಸಂಸದರ ಅಮಾನತು ವಿರೋಧಿಸಿ ಪ್ರತಿಪಕ್ಷಗಳ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸಂಸತ್ತಿನ ಉಭಯ ಸದನಗಳ ಒಟ್ಟು 92 ವಿಪಕ್ಷ ಸಂಸದರನ್ನು ಪ್ರಸಕ್ತ ಚಳಿಗಾಲದ ಅಧಿವೇಶನದ ಉಳಿದ ಅವಧಿಗೆ ಅಮಾನತುಗೊಳಿಸಿರುವುದರ ವಿರುದ್ಧ ಪ್ರತಿಪಕ್ಷಗಳ ಸದಸ್ಯರು ಮಂಗಳವಾರ ಸಂಸತ್ತಿನ ಒಳಗಡೆ ಇರುವ ಮಹಾತ್ಮ ಗಾಂಧಿ ಪ್ರತಿಮೆ ಎದುರು ಪ್ರತಿಭಟನೆ ನಡೆಸಿದರು.

ರಾಜ್ಯಸಭೆ ವಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಎನ್ ಸಿಪಿ ಅಧ್ಯಕ್ಷ ಶರದ್ ಪವಾರ್, ಸಮಾಜವಾದಿ ಪಕ್ಷದ ರಾಮ್ ಗೋಪಾಲ್ ಯಾದವ್ ಮತ್ತಿತರರು ಪಾಲ್ಗೊಂಡರು.

ಪ್ರಜಾಪ್ರಭುತ್ವ ಅಪಾಯದಲ್ಲಿದೆ, ನಾವು ಪಂಜರದಲಿಲ್ಲ ಎಂಬ ಭಿತ್ತಿಪತ್ರ ಹಿಡಿದ ಪ್ರತಿಭಟನಾಕಾರರು ಸಂಸತ್ ಭದ್ರತಾ ಲೋಪ ವಿಚಾರದಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಏಕೆ ಮೌನ ವಹಿಸಿದ್ದಾರೆ ಎಂದು ಪ್ರಶ್ನಿಸಿದರು.

## ವಿಶ್ವ ಮಾನವ ದಿನಾಚರಣೆ ನಿಮಿತ್ತ ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಡಿಸೆಂಬರ್ 29 ರಂದು ಆಚರಿಸಲಾಗುವ ವಿಶ್ವ ಮಾನವ ದಿನಾಚರಣೆ ನಿಮಿತ್ತ ಡಿ. 21 ರಂದು ಬೆಳಿಗ್ಗೆ 11.30 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ.

ಸಭೆಗೆ ಹಾಜರಾಗಿ ಸಲಹೆ / ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿ ಪ್ಯಾಟ್ ಯಂತ್ರದ ಪ್ರಾತ್ಯಕ್ಷಿಕೆ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಜಿಲ್ಲಾ ಚುನಾವಣಾಧಿಕಾರಿಗಳ ಸೂಚನೆಯ ಮೇರೆಗೆ ಮತಯಂತ್ರದ ಪ್ರಾತ್ಯಕ್ಷಿಕೆಯನ್ನು ಪ್ರಮುಖ ಸ್ಥಳಗಳಲ್ಲಿ ನಡೆಸಲಾಗುತ್ತಿದೆ. ವಿವಿ ಪ್ಯಾಟ್ ಯಂತ್ರವು ಮತದಾನ ಖಾತ್ರಿ ಯಂತ್ರವಾಗಿದೆ. ಮತ ಚಲಾಯಿಸಿದ ಅಭ್ಯರ್ಥಿಯ ಕ್ರಮ ಸಂಖ್ಯೆ, ಹೆಸರು ಮತ್ತು ಚಿಹ್ನೆ ಒಂದು ಚೀಟಿಯ ಮೇಲೆ ಕಾಣಿಸಿಕೊಳ್ಳುತ್ತದೆ ಎಂದು ಚುನಾವಣಾ ಸೆಕ್ಟರ್ ಅಧಿಕಾರಿ ಸಂತೋಷ ಗುಡಿಮನಿ ಹೇಳಿದರು.

ಅವರು ತಾಲೂಕಿನ ಡಂಬಳ ಗ್ರಾಮದ ಉಪತಹಸೀಲ್ದಾರ ಕಛೇರಿಯ ಆವರಣದಲ್ಲಿ ಹಮ್ಮಿಕೊಂಡಿದ್ದ ಮತದಾನ, ವಿವಿ ಪ್ಯಾಟ್ ಯಂತ್ರದ ಪ್ರಾತ್ಯಕ್ಷಿಕೆ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಚಲಾಯಿಸಿದ ಮತ ಅದೇ ಅಭ್ಯರ್ಥಿಗೆ ಚಲಾವಣೆಯಾಗಿರುವುದನ್ನು 7 ಸೆಕೆಂಡುಗಳ ಕಾಲ ಈ ಯಂತ್ರದಲ್ಲಿ ನೋಡಬಹುದಾಗಿದೆ. ಚುನಾವಣಾ ವ್ಯವಸ್ಥೆಯಲ್ಲಿ ಪಾರದರ್ಶಕವಾಗಿ, ಮತದಾರರಲ್ಲಿ ಇನ್ನಷ್ಟು ಖಾತರಿ ತರಲು ಚುನಾವಣೆಯಲ್ಲಿ ವಿವಿ ಪ್ಯಾಟ್ ಅಳವಡಿಸಲಾಗಿದೆ ಎಂದರಲ್ಲದೆ, ಮುಂಬರುವ ಚುನಾವಣೆಯಲ್ಲಿ ಪ್ರತಿಯೊಬ್ಬ ಮತದಾರನೂ ಆತ್ಮವಿಶ್ವಾಸದಿಂದ ಮತ ಚಲಾಯಿಸಿ, ಪ್ರಜಾಪ್ರಭುತ್ವ ಬಲಪಡಿಸಬೇಕು ಎಂದು ಕರೆ ನೀಡಿದರು.

ಗ್ರಾಮ ಆಡಳಿತಾಧಿಕಾರಿ ಮಂಜುನಾಥ ಮಂಡಾಗಣಿ, ದ್ವಿತೀಯ ದರ್ಜೆ ಸಹಾಯಕ ಮೃತ್ಯುಂಜಯ ವಿಭೂತಿ ಮಾತನಾಡಿದರು. ಪ್ರಾತ್ಯಕ್ಷಿಕೆ ವೀಕ್ಷಿಸಿದ ಸಾರ್ವಜನಿಕರು ತಮ್ಮ ಸಂಶಯಗಳನ್ನು ಅಧಿಕಾರಿಗಳಲ್ಲಿ ಚರ್ಚಿಸಿ ಪರಿಹರಿಸಿಕೊಂಡರು. ಈ ಸಂದರ್ಭದಲ್ಲಿ ಬಿಎಲ್‌ಓ ಮತ್ತು ಕಂದಾಯ ಸಿಬ್ಬಂದಿಗಳು ಇದ್ದರು.

### ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ

# ಕಾಯ್ದೆ ಉಲ್ಲಂಘಿಸಿದವರನ್ನು ಅಮಾನತುಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಸರ್ಕಾರದ ಆದೇಶ ಹಾಗೂ ಕೇಂದ್ರ ಸರ್ಕಾರದ ಕಾಯ್ದೆ ಉಲ್ಲಂಘಿಸಿ ಅಧಿಕಾರದ ದುರ್ಬಳಕೆ ಮಾಡಿಕೊಂಡು ಬೀದಿ ವ್ಯಾಪಾರಿಗಳಿಗೆ ಅನ್ಯಾಯವೆಸಗುತ್ತಿದ್ದು, ಅಂತಹ ಅಧಿಕಾರಿಗಳನ್ನು ಅಮಾನತು ಮಾಡಿ ಸೂಕ್ತ ಕ್ರಮ ಜರುಗಿಸಬೇಕು ಎಂದು ಬೀದಿ ವ್ಯಾಪಾರಿಗಳ ಸಂಘದ ವತಿಯಿಂದ ಮೆರವಣಿಗೆ ನಡೆಸಿ, ಜಿಲ್ಲಾಧಿಕಾರಿಗಳಿಗೆ ಬೇಡಿಕೆಗಳ ಈಡೇರಿಕೆಗಾಗಿ ಮನವಿ ಸಲ್ಲಿಸಿದರು.

ಪೂರ್ಣ ಪ್ರಮಾಣದ ಮಾರಾಟ ಸಮಿತಿ ರಚಿಸುವುದು, ಬೀದಿ ವ್ಯಾಪಾರಿಗಳ ಪಟ್ಟಣ ಮಾರಾಟ ಸಮಿತಿಯ ಹೆಸರಲ್ಲಿ ಖಾತೆ ತೆಗೆದು ಶುಲ್ಕ ಸಂಗ್ರಹಿಸುವುದು, ಬೀದಿ ವ್ಯಾಪಾರಿಗಳಿಗೆ ಪ್ರತಿ ಸ್ಥಳೀಯ ಸಂಸ್ಥೆಗಳಲ್ಲಿ ಕ್ಯೂಆರ್ ಕೋಡ್ ಇರುವ ಐಡಿ ಕಾರ್ಡ್ ಹಾಗೂ ಪ್ರಮಾಣಪತ್ರ ವಿತರಿಸುವುದು, ಸ್ಥಳೀಯ ಸಂಸ್ಥೆಗಳಿಗೆ ಬೀದಿ ವ್ಯಾಪಾರಿಗಳ ಕಾಯ್ದೆ ಹಾಗೂ ಯೋಜನೆ ಅನುಷ್ಠಾನಗೊಳಿಸಲು ಕೌಶಲ್ಯ ಅಭಿವೃದ್ಧಿ ಹಾಗೂ ಡೇ-ನಲ್ಮ್ ಅಧಿಕಾರಿಗಳು ಭೇಟಿ ನೀಡಿ ಸಭೆ ನಡೆಸುವುದು, ಪಟ್ಟಣ ಮಾರಾಟ ಸಮಿತಿ ಸದಸ್ಯರಿಗೆ ಭತ್ಯೆ ನೀಡುವುದು, ಬೀದಿ ವ್ಯಾಪಾರಿಗಳ ಆರೋಗ್ಯ ತಪಾಸಣೆಗೆ ಕ್ರಮ ಕೈಗೊಳ್ಳುವುದು, ಬೀದಿ ವ್ಯಾಪಾರಿಗಳ ಮೂಲಭೂತ ಅಭಿವೃದ್ಧಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದು ಇವೇ ಮುಂತಾದದ ಬೇಡಿಕೆಗಳನ್ನು ಈಡೇರಿಸಬೇಕೆಂದು ಆಗ್ರಹಿಸಿದರು.


ಬೀದಿ ವ್ಯಾಪಾರಿಗಳಿಗೆ ತರಬೇತಿ ನೀಡಿ ಅವರಿಗೆ ಸ್ಟೈಪಂಡ್ ನೀಡದೆ, ಗುತ್ತಿಗೆದಾರರಿಗೆ ಮಾತ್ರ ಬಿಲ್ ಪಾವತಿಸಿರುವುದು, ಪಟ್ಟಣ ಮಾರಾಟ ಸಮಿತಿಯ ಸದಸ್ಯರಿಗೆ ಸರ್ಕಾರದಿಂದ ಬಂದ ತರಬೇತಿ ನೀಡದೆ ಅಧಿಕಾರದ ದುರ್ಬಳಕೆ ಮಾಡಿರುವುದು ಖಂಡನೀಯವಾಗಿದೆ ಎಂದು ಸಂಘದ ಸದಸ್ಯರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ, ಗಜೇಂದ್ರಗಡ, ರೋಣ, ನರೇಗಲ್, ಮುಂಡರಗಿ, ಶಿರಹಟ್ಟಿ, ಲಕ್ಷ್ಮೇಶ್ವರ, ಮುಳಗುಂದ ಪಟ್ಟಣದ ಮುಖಂಡರಾದ ಕಳಕಪ್ಪ ಪೋತಾ, ಭಾಷಾಸಾಬ ಕರ್ನಾಚಿ, ಹನಮಂತಪ್ಪ ಹಡಗಲಿ, ಶಿವಾನಂದ ನರೇಗಲ್ಲ, ಮಹಮ್ಮದ ಕಾತರಕಿ, ಶಬ್ಬೀರ ನಗಾರಿ, ಆನಂದ ಕೋಳಿ, ಮಂಜುನಾಥ ಹೊಗೆಸೊಪ್ಪಿನ, ಭೀಮಪ್ಪ ಕೋಳಿ, ಬಸವರಾಜ, ವಿಕಾಸ, ಸೇರಿದಂತೆ ಬೀದಿ ಬದಿ ವ್ಯಾಪಾರಸ್ಥರು ಪಾಲ್ಗೊಂಡಿದ್ದರು.



> ಇವೆಲ್ಲಾ ಅಂಶಗಳು ಬೀದಿ ವ್ಯಾಪಾರಿಗಳ ಹಕ್ಕುಗಳಾಗಿದ್ದರೂ ಸಹ, ಸಂಬಂಧಪಟ್ಟ ಅಧಿಕಾರಿಗಳು ಕಾಯ್ದೆ ಪಾಲಿಸದೆ ಅಧಿಕಾರದ ದುರ್ಬಳಕೆ ಹಾಗೂ ಕರ್ತವ್ಯ ಲೋಪವೆಸಗಿರುವುದು ಕಂಡು ಬಂದಿದ್ದು, ಕಾಯ್ದೆ ಉಲ್ಲಂಘಿಸಿದ ಅಧಿಕಾರಿಗಳನ್ನು ಅಮಾನತು ಮಾಡಿ ಸೂಕ್ತ ಕ್ರಮ ಕೈಗೊಳ್ಳಬೇಕು ಭಾಷಾಸಾಬ ಮಲ್ಲಸಮುದ್ರ ಆಗ್ರಹಿಸಿದರು.

## ರಾಜ್ಯದಲ್ಲಿ ಕೋವಿಡ್ ಪ್ರಕರಣಗಳ ಸಂಖ್ಯೆ 79ಕ್ಕೆ ಏರಿಕೆ



**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ದೇಶದಲ್ಲಿ ಕೋವಿಡ್ ಉಪತಳಿ ಜೆಎನ್ 1 ಪ್ರಕರಣ ಪತ್ತೆಯಾಗಿದ್ದು, ಮತ್ತೆ ಕೊರೋನಾ ಆಂತಕ ಶುರುವಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಆರೋಗ್ಯ ಇಲಾಖೆ ಅಲರ್ಟ್ ಆಗಿದ್ದು, ಟೆಸ್ಟಿಂಗ್ ಹೆಚ್ಚಿಸಲು ತೀರ್ಮಾನಿಸಿದೆ.

ಈ ಮಧ್ಯೆ ರಾಜ್ಯದಲ್ಲಿ ಮಂಗಳವಾರ ಒಂದೇ ದಿನ 44 ಕೊರೋನಾ ಪಾಸಿಟಿವ್ ಪ್ರಕರಣಗಳು ಪತ್ತೆಯಾಗಿವೆ. ಇದರರೊಂದಿಗೆ ಕೊರೋನಾ ಸಕ್ರಿಯ ಪ್ರಕರಣಗಳ ಸಂಖ್ಯೆ 79ಕ್ಕೆ ಏರಿಕೆಯಾಗಿದೆ.

ಮಂಗಳವಾರ ಆಸ್ಪತ್ರೆಯಿಂದ 35 ಮಂದಿ ಡಿಸ್ಚಾರ್ಜ್ ಆಗಿದ್ದು, ರಾಜ್ಯದಲ್ಲಿ ಒಟ್ಟು 79 ಸಕ್ರಿಯ ಕೊರೋನಾ ಕೇಸ್‌ಗಳಿವೆ. ಇದರೊಂದಿಗೆ ಕರ್ನಾಟಕದಲ್ಲಿ ಕೊರೋನಾ ಪಾಸಿಟಿವಿಟಿ ಪ್ರಮಾಣ ಶೇ.6.09ರಷ್ಟಿದೆ ಎಂದು ಆರೋಗ್ಯ ಇಲಾಖೆ ಮಾಹಿತಿ ನೀಡಿದೆ.

ನೆರೆಯ ಕೇರಳದಲ್ಲಿ ಕೋವಿಡ್-19 ಜೆಎನ್1 ರೂಪಾಂತರಿ ಪತ್ತೆಯಾದ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಕೈಗೊಳ್ಳಬೇಕಾದ ಅಗತ್ಯ ಮುಂಜಾಗ್ರತೆ ಹಾಗೂ ಪೂರ್ವಭಾವಿ ಕ್ರಮಗಳ ಕುರಿತು ರಾಜ್ಯ ಆರೋಗ್ಯ ಇಲಾಖೆ ಮಾರ್ಗಸೂಚಿಗಳನ್ನು ಪ್ರಕಟಿಸಿದೆ.

ಕೇರಳ ಹಾಗೂ ತಮಿಳುನಾಡು ರಾಜ್ಯಕ್ಕೆ ಹೊಂದಿಕೊಂಡಿರುವ ಗಡಿ ಭಾಗದ ಜಿಲ್ಲೆಗಳಲ್ಲಿ ಅಗತ್ಯ ಸಂಖ್ಯೆಯ ಪರೀಕ್ಷೆ ನಡೆಸಿ, ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ. ಔಷಧ, ಆಕ್ಸಿಜನ್, ಬೆಡ್ ವ್ಯವಸ್ಥೆ ಮಾಡಿಕೊಳ್ಳಲು ಸೂಚನೆ ನೀಡಲಾಗಿದೆ.


ಅಲ್ಲದೇ ಕೊವಿಡ್ ಟೆಸ್ಟ್ ಹೆಚ್ಚಿಸಲು ಅಧಿಕಾರಿಗಳು, ಸಿಬ್ಬಂದಿಗೆ ಸೂಚಿಸಲಾಗಿದೆ.

### ಜಗದೆಲ್ಲ ಅಳಲನ್ನು ತಾವೇ ಅನುಭವಿಸಿದ ಕವಿ ಈಶ್ವರ ಸಣಕಲ್

# ತಾ ನೊಂದರೂ ಜಗವೆಲ್ಲ ನಗುತಿರಲಿ

'ಜಗವೆಲ್ಲ ನಗುತಿರಲಿ!
ಜಗದಳುವು ನನಗಿರಲಿ!
ನಾನಳಲು, ಜಗವೆನ್ನನೆತ್ತಿಕೊಳದೇ?
ನಾ ನಕ್ಕು, ಜಗವಳಲು ನೋಡಬಹುದೇ?'

ಈ ಸಾಲುಗಳು ಎಂತವರ ಮನದಾಳಕ್ಕೂ ಇಳಿದು, ಅವರ ಅಂತರಂಗಕ್ಕೆ ಬೆಚ್ಚಗಿನ ಭಾವ ತುಂಬಿ ಅಪ್ಯಾಯಮಾನವಾಗಿ ಅಪ್ಪುಗೆ ಕೊಡಲಾರದೆ ಬಿಡದು. ಇವು ಜೀವನದುದ್ದಕ್ಕೂ ನೋವನುಂಡು, ನಗುವ ಹರಸಿದ ಜೀವಕವಿ ಈಶ್ವರ ಸಣಕಲ್ಲರವರ ಜೀವಂತಿಕೆಯ ನಲ್ನುಡಿಗಳು. ಇಂದು ಅವರ 118ನೇ ಜನ್ಮದಿನ.



ಬಡವನಾಗಿ ಹುಟ್ಟಿ, ಬಡವನಾಗಿ ಬದುಕಿ, ಬಡವನಾಗಿ ಇಹಲೋಕ ತ್ಯಜಿಸಿದ ಕನ್ನಡದ ಸಿರಿವಂತ ಕವಿ ಈಶ್ವರ ಸಣಕಲ್ಲ. ಹುಟ್ಟಿದಾರಭ್ಯದಿಂದ ಮಸಣ ಸೇರುವವರೆಗೂ ಜೀವನದಲ್ಲಿ ಬೆಳಕು ಕಾಣದೆ ಹೋದ ದುರ್ದೈವಿ. ತಾವು ಜೀವನದಲ್ಲಿ ಕಂಡುಂಡ ನೋವುಗಳಿಗೆ, ಕಷ್ಟ ಕಾರ್ಪಣ್ಯಗಳಿಗೆ ಅಕ್ಷರದ ರೂಪ ನೀಡಿ ತಮ್ಮನ್ನು ತಾವೇ ಸಂತೈಸಿಕೊಂಡಿದ್ದಾರೆ.

ಈಶ್ವರ್ ಸಣಕಲ್‌ರ ಊರು ಬಾಗಲಕೋಟೆ ಜಿಲ್ಲೆಯ ರಬಕವಿ. ತಂದೆ ಮಹಾರುದ್ರಪ್ಪ, ತಾಯಿ ನೀಲಮ್ಮ. ನೇಕಾರಿಕೆಯಿಂದಲೇ ಜೀವನ ನೇಯುವ ಬಡ ಕುಟುಂಬದಿಂದ ಬಂದವರು. ಆದರೆ ಅಜ್ಜ ಮಲ್ಲಪ್ಪನ ಮಾರ್ಗದರ್ಶನ, ಶಿಸ್ತು-ಸಂಯಮ, ಅಕ್ಷರಭ್ಯಾಸ ಬಾಲಕ ಈಶ್ವರ ಸಣಕಲ್‌ರಲ್ಲಿ ಜೀವನದ ಗತಿಯನ್ನು ನಿರ್ಧರಿಸಿತು. 5ನೇ ವಯಸ್ಸಿಗೆ ತಂದೆಯ ಅಗಲಿಕೆಯ ಕಾರಣದಿಂದಾಗಿ ರಬಕವಿಗೆ ವಾಪಸ್ ಬರಬೇಕಾಯಿತು. ರಬಕವಿಯ ಹಿರಿಯರಾದ ತಮ್ಮಣ್ಣಪ್ಪ ಚಿಕ್ಕೋಡಿ, ಮುರುಗಯ್ಯ ಬಾಗೋಜಿಮಠ ಮಾಸ್ತರ, ಮಿಗಿಲಾಗಿ ಬೈರಪ್ಪ ಹುದ್ದಾರ ಮಾಸ್ತರ ಇವರೆಲ್ಲರ ನಿರಂತರ ಪ್ರೋತ್ಸಾಹ ಬಲದಿಂದ ಈಶ್ವರ ಸಣಕಲ್ಲ ವಿದ್ಯಾವಂತನಾಗಲು ಹಾಗೂ ಸುಸಂಸ್ಕೃತನಾಗಲು ದಾರಿ ಮಾಡಿ ಕೊಟ್ಟಿತು.

ಹೈಸ್ಕೂಲ್ ಓದುತ್ತಿರುವಾಗ ರವೀಂದ್ರನಾಥ ಟ್ಯಾಗೋರರತ್ತ ಆಕರ್ಷಣೆ ಹೇಳತೀರದಷ್ಟು. ಟ್ಯಾಗೋರ ಗೀತಾಂಜಲಿಯ ಕೆಲವು ಗೀತೆ, ಲೇಖನಗಳಿಂದ ಪ್ರಭಾವಿತರಾದರು. ಅದರಿಂದಾಗಿ ಮನದಲ್ಲಿ ಶಾಂತಿನಿಕೇತನ ನೋಡುವ ಆಶೆ ಚಿಗುರೊಡೆದಿತ್ತು. ಆದರೆ ಹಣವಿಲ್ಲ. ಯಾರಿಗೂ ಹೇಳದೆ ಕೇಳದೆ ಗುರು ರವೀಂದ್ರನಾಥ ಟ್ಯಾಗೋರರ ಶಾಂತಿನಿಕೇತನದತ್ತ ಕಾಲ್ನಡಿಗೆಯಲ್ಲಿಯೇ ಈಶ್ವರ ಸಣಕಲ್ಲ ಪ್ರಯಾಣ ಆರಂಭಿಸಿದರು. ದೂರದ ಮಹಾರಾಷ್ಟ್ರದ ಕರಾಡ ತಲುಪಿ ಅಲ್ಲಿ ರಬಕವಿಯ ವರ್ತಕರಾದ ಪರಪ್ಪ ದಡ್ಡ ಅವರ ಆತಿಥ್ಯ ಪಡೆದು ಅಲ್ಲಿಯೇ ತಂಗಿದರು.

ಕಿತ್ತು ತಿನ್ನುವ ಬಡತನದ ಕಾರಣಕ್ಕಾಗಿ ಮೆಟ್ರಿಕ್ ಪರೀಕ್ಷೆಯನ್ನು ಕೂಡ ಕಟ್ಟಲು ಸಾಧ್ಯವಾಗಲಿಲ್ಲ. ತಾಯಿ ಅವರಿವರ ಮನೆಯಲ್ಲಿ ಕೂಲಿ ಮಾಡಿ ದುಡ್ಡು ಕೂಡಿಸಿ ಕೊಟ್ಟರೂ ದುಡ್ಡು ಹೊಂದಿಸಲು ಸಾಧ್ಯವಾಗದೇ ಇದ್ದಾಗ ಹೃದಯವಂತ ಗೆಳೆಯರ ಸಹಾಯದಿಂದ ಮೆಟ್ರಿಕ್ ಪರೀಕ್ಷೆ ಕಟ್ಟಿ 1930ರಲ್ಲಿ ಪರೀಕ್ಷೆಯನ್ನು ಪಾಸಾದರು. ಆದರೆ ಉನ್ನತ ಶಿಕ್ಷಣದ ಹಸಿವು ಮತ್ತಷ್ಟು ಕಾಡತೊಡಗಿತ್ತು. ಇದೇ ಕಾಲಕ್ಕೆ ಮಹಾತ್ಮ ಗಾಂಧಿಯವರ ಅಸಹಕಾರ ಆಂದೋಲನ ಈಶ್ವರ್ ಸಣಕಲರನ್ನು ಕೈಬೀಸಿ ಕರೆಯಿತು. ರಬಕವಿಯ ಕೆಲವ ಮಿತ್ರರು ಸೇರಿ "ಮಿತ್ರ ಸಮೂಹ ಖಾದಿ ಬಾಂಡಾರ" ಸ್ಥಾಪಿಸಿದರು.

ಈ ಹಂತದಲ್ಲಿ ವಚನ ಸಂಶೋಧನಾ ಪಿತಾಮಹ ಫ.ಗು. ಹಳಕಟ್ಟಿಯವರ ಸಂಪರ್ಕದಿಂದಾಗಿ ಅವರ ಶಿವಾನುಭವ, ನವಕರ್ನಾಟಕ ಪತ್ರಿಕೆಗಳಲ್ಲಿ ಸಹಾಯಕರಾಗಿ ಕೆಲಸಕ್ಕೆ ಸೇರಿದರು. ಜೊತೆಗೆ ಕವನಗಳನ್ನು ಪತ್ರಿಕೆಗೆ ನಿರಂತರವಾಗಿ ಬರೆಯುತ್ತಿದ್ದರು. ಹಳಕಟ್ಟಿ ಅವರ ಪ್ರೋತ್ಸಾಹದಿಂದಾಗಿ ಈಶ್ವರ ಸಣಕಲ್‌ರ ಕನ್ನಡದ ಶ್ರೇಷ್ಠ ಕವನ ಸಂಕಲನ 'ಕೋರಿಕೆ' 1934ರಲ್ಲಿ ಪ್ರಕಟವಾಯಿತು.

ಸಣಕಲ್‌ರವರು 1935ರಲ್ಲಿ ನೌಕರಿಯನ್ನು ಅರಸಿ ಬೆಳಗಾವಿಗೆ ಬಂದರು. ಮುಂದೆ ಕಾರವಾರ, ಬೆಳಗಾವಿ, ಧಾರವಾಡ, ವಿಜಾಪುರ ಜಿಲ್ಲೆಗಳ ಸಹಕಾರಿ ಪ್ರಶಿಕ್ಷಣ ಮೇಲ್ವಿಚಾರಕ ಕಾಯಂ ಹುದ್ದೆ ಅವರ ಪಾಲಿಗಾಯಿತು. ಇನ್ನೇನು ಜೀವನ ಸರಿಯಾಯ್ತು ಎನ್ನುವಷ್ಟರಲ್ಲಿಯೇ ಸಣ್ಣವಯದಲ್ಲಿಯೇ ಮದುವೆ ಆದ ಪತ್ನಿಯು 1939ರಲ್ಲಿ ಹೆಣ್ಣು ಮಗುವನ್ನು ಹೆತ್ತು ಕಣ್ಣು ಮುಚ್ಚಿದಳು.

1962ರಲ್ಲಿ ಆರ್.ಸಿ. ಹಿರೇಮಠರ ಆಹ್ವಾನದಿಂದ ವಚನ ಸಂಶೋಧನೆ ವಿಭಾಗದಲ್ಲಿ ಸಹಾಯಕ ಸಂಶೋಧಕರಾಗಿ ಧಾರವಾಡಕ್ಕೆ ಆಗಮಿಸಿದರು. ಧಾರವಾಡದ ಒಂದು ಚಿಕ್ಕ ಬಾಡಿಗೆ ಮನೆಯಲ್ಲಿ ವಾಸ, 9 ಜನರ ಸಂಸಾರ ರಥ ಸಾಗಿಸುವ ಸಾಹಸ. 1972ರಲ್ಲಿ ಅದರಿಂದ ನಿವೃತ್ತರಾಗುತ್ತಾರೆ. ರಾಷ್ಟ್ರಕವಿ ಕುವೆಂಪುರವರು ಈಶ್ವರ ಸಣಕಲ್‌ರ ಮೊದಲ ಭೇಟಿಯಲ್ಲಿ ಅವರ ಕಾಲು ಮುಗಿದು 'ಅಣ್ಣಯ್ಯ' ಎಂದು ಸಂಬೋಧಿಸಿದ್ದು ಈಶ್ವರ ಸಣಕಲ್‌ರ ಶ್ರೇಷ್ಠತೆಯನ್ನು ಸಾರುತ್ತದೆ.

ಈಶ್ವರ ಸಣಕಲ್ ಹಾಗೂ ದುರ್ವಿಧಿ ಅನ್ನುವುದು ಒಂದೇ ನಾಣ್ಯದ ಎರಡು ಮುಖಗಳಂತೆ ಸಾಗಿ ಬಂದಿದ್ದು ಅವರ ಬದುಕಿನ ವಿಪರ್ಯಾಸ. ಕೊನೆಗೆ ಹುಬ್ಬಳ್ಳಿಯ ಕೆ.ಎಂ.ಸಿ ಆಸ್ಪತ್ರೆಗೆ ದಾಖಲಾದರು. 3-12-1984ರಲ್ಲಿ ಅಲ್ಲಿಯೇ ತಮ್ಮ ಕೊನೆಯುಸಿರೆಳೆದರು. ಜಗವೆಲ್ಲ ನಗುತಿರಲಿ ಎಂದು ಹರಸಿದ ಕವಿ ಜಗದೆಲ್ಲ ಅಳಲನ್ನು ತಾವೇ ಅನುಭವಿಸಿ ಅದರಲ್ಲೇ ಹೋದರು.



**-ಈಶ್ವರ ಎಸ್. ಮೆಡ್ಲೇರಿ.**
ಅಧ್ಯಕ್ಷರು,
ಕಸಾಪ-ಲಕ್ಷ್ಮೇಶ್ವರ.

## ಶ್ರೀ ಜ. ಶಿವಾನಂದ ಕಾಲೇಜಿನ ಶೈಕ್ಷಣಿಕ ಪ್ರವಾಸ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಶ್ರೀ ಜಗದ್ಗುರು ಶಿವಾನಂದ ಪದವಿಪೂರ್ವ ವಿಜ್ಞಾನ ಕಾಲೇಜಿನ ವತಿಯಿಂದ ಶೈಕ್ಷಣಿಕ ಪ್ರವಾಸವನ್ನು ಹಮ್ಮಿಕೊಳ್ಳಲಾಗಿತ್ತು. ಮಲೆನಾಡಿನ ದಾಂಡೇಲಿಯ ಸುತ್ತಮುತ್ತಲಿನ ಸ್ಥಳಗಳಾದ ಮೌಲಂಗಿ ಪಾರ್ಕ್, ಸೂಪಾ ಆಣೆಕಟ್ಟು, ಮೊಸಳೆ ಉದ್ಯಾನವನ ಮುಂತಾದೆಡೆ ಪ್ರವಾಸ ಕೈಗೊಂಡರು.

ಉಪನ್ಯಾಸಕ ಕೃಷ್ಣಪ್ರಸಾದ ಜಾಧವ, ಪ್ರಿಯಂಕಾ ಪಾಟೀಲ ಮತ್ತು ಸಹ ಶಿಕ್ಷಕರು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

## ಬಗರ್ ಹುಕುಂ ಅರ್ಜಿ ಸಲ್ಲಿಕೆ ಇನ್ನು ಸುಲಭ: ಆ್ಯಪ್ ಬಿಡುಗಡೆ ಮಾಡಿದ ಸಚಿವ ಕೃಷ್ಣ ಬೈರೇಗೌಡ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜ್ಯ ಸರ್ಕಾರ ಭೂಮಿ ಅಕ್ರಮ ಸಾಗುವಳಿದಾರರ ಪಾಲಾಗುವುದನ್ನು ತಪ್ಪಿಸಲು ರಾಜ್ಯ ಸರ್ಕಾರ ಬಗರ್ ಹುಕುಂ ಆ್ಯಪ್ ಬಿಡುಗಡೆ ಮಾಡಿದೆ. ಸಾಗುವಳಿ ಭೂಮಿಯಲ್ಲಿ ಕೃಷಿ ಅಥವಾ ಇನ್ನಾವುದೇ ಚಟುವಟಿಕೆ ಬಗ್ಗೆ ಸ್ಯಾಟಲೈಟ್ ಇಮೇಜ್ ಮೂಲಕ ಮಾಹಿತಿ ಪಡೆದು ಅರ್ಜಿ ವಿಲೇವಾರಿ ಮಾಡುವುದಕ್ಕೆ ಸರ್ಕಾರ ಬಗರ್ ಹುಕುಂ ಆ್ಯಪ್ ರೂಪಿಸಿದೆ.

ಆಪ್ ಬಿಡುಗಡೆ ಮಾಡಿ ಮಾತನಾಡಿದ ಕಂದಾಯ ಸಚಿವ ಕೃಷ್ಣ ಬೈರೇಗೌಡ, ನಮೂನೆ 50, 53, 57ರ ಅಕ್ರಮ ಸಕ್ರಮ ಯೋಜನೆಯಡಿ ಸಾವಿರಾರು ಅರ್ಜಿಗಳು ಸಲ್ಲಿಕೆಯಾಗಿವೆ. ಆದರೆ ಕೃಷಿಯೇತರ ಚಟುವಟಿಕೆಗಳಲ್ಲಿ ತೊಡಗಿರುವವರಿಗೂ ಸಹ ಸಾಗುವಳಿ ಚೀಟಿ ನೀಡುವುದು ಅಸಾಧ್ಯ. ಅಲ್ಲದೆ, ಸಾವಿರಾರು ಎಕರೆ ಸರ್ಕಾರಿ ಭೂಮಿ ಅಕ್ರಮ ಸಾಗುವಳಿದಾರರ ಪಾಲಾಗಿದ್ದು, ಪ್ರತಿಯೊಂದು ಭಾಗಕ್ಕೂ ಅಧಿಕಾರಿಗಳೇ ನೇರ ಹೋಗಿ ಕೃಷಿ ನಡೆಯುತ್ತಿದೆಯೇ? ಎಂದು ಪರಿಶೀಲಿಸುವುದು ಸಾಧ್ಯವಿಲ್ಲ. ಹೀಗಾಗಿ ಬಗರ್ ಹುಕುಂ ತಂತ್ರಾಂಶ ಬಳಸಿ ಅರ್ಜಿ ವಿಲೇ ಮಾಡಲಾಗುತ್ತದೆ ಎಂದು ಕೃಷ್ಣ ಬೈರೇಗೌಡ ತಿಳಿಸಿದರು.

ಹೀಗಾಗಿ ಬಗರ್ ಹುಕುಂ ತಂತ್ರಾಂಶದ ಮೂಲಕ ಅಕ್ರಮ ಸಾಗುವಳಿ ಭೂಮಿಯಲ್ಲಿ ಕೃಷಿ ಅಥವಾ ಇನ್ನಾವುದೇ ಚಟುವಟಿಕೆ ಬಗ್ಗೆ ಸ್ಯಾಟಲೈಟ್ ಇಮೇಜ್ ಮೂಲಕ ಮಾಹಿತಿ ಪಡೆದು ಅರ್ಜಿ ವಿಲೇವಾರಿ ಮಾಡುವುದಕ್ಕೆ ಹಾಗೂ ಅರ್ಜಿಗಳ ಶೀಘ್ರ ಪ್ರಕ್ರಿಯೆಗೂ ಈ ಆ್ಯಪ್ ಸಹಕಾರಿಯಾಗಲಿದೆ.

ಗ್ರಾಮ ಲೆಕ್ಕಿಗ ಸ್ಥಳಕ್ಕೆ ತೆರಳಿ ಈ ಆ್ಯಪ್ ಮೂಲಕ ಜಿಯೋ ಫೆನ್ಸ್ ಮಾಡಿ ಆ ಮಾಹಿತಿಯನ್ನು ಕಂದಾಯ ನಿರೀಕ್ಷಕ ಹಾಗೂ ಸರ್ವೇ ಇಲಾಖೆ ಲಾಗಿನ್‌ಗೆ ಕಳುಹಿಸುತ್ತಾರೆ. ಇದರ ಸಹಾಯದಿಂದ ತಹಶೀಲ್ದಾರ್ ಸ್ಯಾಟಲೈಟ್ ಇಮೇಜ್ ಪಡೆದು ನಿಜಕ್ಕೂ ಅಲ್ಲಿ ಕೃಷಿ ನಡೆಸುತ್ತಿದ್ದಾರ ಎಂಬ ಮಾಹಿತಿ ಕಲೆಹಾಕುತ್ತಾರೆ. ಅಲ್ಲದೆ ಆ ಇಮೇಜ್ ಜೊತೆಗೆ ಎಲ್ಲಾ ಮಾಹಿತಿಯನ್ನು ಬಗರ್ ಹುಕುಂ ಕಮಿಟಿ ಮುಂದೆ ಸಲ್ಲಿಸಿ ಓಟಿಪಿ ಮೂಲಕ ಕೆವೈಸಿ ಮಾಡುವ ಮೂಲಕ ಋಜುವಾತು ಮಾಡುತ್ತಾರೆ. ಈ ಮೂಲಕ ಅಕ್ರಮ ಸಕ್ರಮ ಆಗುವುದಲ್ಲದೇ ಅಧಿಕಾರಿಗಳ ಕೆಲಸವೂ ಸುಲಭವಾಗಲಿದ್ದು ಭೂದಾರರಿಗೂ ಸಹಾಯ ಆಗಲಿದೆ ಎಂದು ಹೇಳಿದ್ದಾರೆ.

## ಸಂಸತ್ ಮೇಲಿನ ದಾಳಿ ಬಗ್ಗೆ ಚರ್ಚೆ ಬೇಡ ಅಂದರೆ ಹೇಗೆ?: ಈಶ್ವರ್ ಖಂಡ್ರೆ ಪ್ರಶ್ನೆ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಸಂಸತ್ ಮೇಲಿನ ದಾಳಿ ಬಗ್ಗೆ ಚರ್ಚೆ ಬೇಡ ಅಂದರೆ ಹೇಗೆ? ಬಿಜೆಪಿಯವರು ಸರ್ವಾಧಿಕಾರಿ ಧೋರಣೆ ಮಾಡುತ್ತಿದ್ದಾರೆ ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ಹೇಳಿದರು.

ಸಂಸತ್‌ನಲ್ಲಿ ವಿಪಕ್ಷ ಸಂಸದರ ಅಮಾನತು ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಬಿಜೆಪಿಗೆ ಅಧಿಕಾರದ ಮದ ನೆತ್ತಿಗೆರಿದೆ. 3 ರಾಜ್ಯ ಹೇಗೋ ಮಾಡಿ ಗೆದ್ದಿದ್ದೇವೆ ಎಂದು ಹೀಗೆ ಮಾಡುತ್ತಿದ್ದಾರೆ.



ಪ್ರಜಾಪ್ರಭುತ್ವದ ಕಗ್ಗೊಲೆ ಆಗುತ್ತಿದೆ. ಇದನ್ನು ಎಲ್ಲರೂ ಖಂಡಿಸಬೇಕು ಎಂದರು. ಸಂಸತ್ ಮೇಲಿನ ದಾಳಿ ಬಗ್ಗೆ ಚರ್ಚೆ ಬೇಡ ಅಂದರೆ ಹೇಗೆ? ಬಿಜೆಪಿಯವರು ಸರ್ವಾಧಿಕಾರಿ ಧೋರಣೆ ಮಾಡುತ್ತಿದ್ದಾರೆ. ಮತ್ತೆ ನಾವೇ ಅಧಿಕಾರಕ್ಕೆ ಬರುತ್ತೇವೆ ಅಂದುಕೊಂಡು ಹೀಗೆ ಮಾಡುತ್ತಿದ್ದಾರೆ. ಮೋದಿ, ಅಮಿತ್ ಶಾ ಅಧಿವೇಶನಕ್ಕೆ ಬರಲ್ಲ.

ಹಾಗಾದರೆ ಅಧಿವೇಶನ ಯಾಕೆ ನಡೆಯಬೇಕು? ಕಾಂಗ್ರೆಸ್ ಅವರು ಹಿಂದೆ ಮಾಡಿದ್ರು ನಾವೂ ಮಾಡ್ತೀವಿ ಅಂದರೆ ಹೇಗೆ? ಅದನ್ನು ಅವರು ಜನರ ಮುಂದೆ ಹೇಳಲಿ.


ಬಿಜೆಪಿಯವರು ದೇಶವನ್ನು ಹಾಗೆ ಮಾಡ್ತೀವಿ, ಹೀಗೆ ಮಾಡ್ತೀವಿ ಅಂದರು. ಆದರೆ ಅವರು ಹೇಳಿದ್ದು ಏನೂ ಮಾಡಿಲ್ಲ. ಇದಕ್ಕೆ ಬಿಜೆಪಿ ಅವರು ಉತ್ತರ ಕೊಡಬೇಕು ಎಂದು ವಾಗ್ದಾಳಿ ನಡೆಸಿದರು.

## ಉತ್ತರ ಕರ್ನಾಟಕದ ಅಭಿವೃದ್ಧಿ ಬಗ್ಗೆ ಸರ್ಕಾರ ನಿರ್ಲಕ್ಷ್ಯ : ಸಿಎಂಗೆ ಬೊಮ್ಮಾಯಿ ಪತ್ರ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಉತ್ತರ ಕರ್ನಾಟಕದ ಅಭಿವೃದ್ಧಿ ಕುರಿತ ಚರ್ಚೆಗೆ ಬೆಳಗಾವಿ ಅಧಿವೇಶನದಲ್ಲಿ ಸಮರ್ಪಕ ಉತ್ತರ ನೀಡದ ಸರಕಾರ ಆ ಭಾಗದ ಜನರ ನಿರೀಕ್ಷೆ ಹುಸಿಗೊಳಿಸಿದೆ. ಜತೆಗೆ ಅಭಿವೃದ್ಧಿ ಪರವಾದ ಯಾವುದೇ ಹೊಸ ನಿರ್ಣಯ ಪ್ರಕಟಿಸದೆ ಈಗಾಗಲೇ ಇರುವ ಕಾರ್ಯಕ್ರಮಗಳನ್ನು ಮತ್ತೆ ಘೋಷಿಸಲಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸುದೀರ್ಘ ಪತ್ರ ಬರೆದಿರುವ ಅವರು, "ಉತ್ತರ ಕರ್ನಾಟಕವಷ್ಟೆ ಅಲ್ಲ, ಸಮಗ್ರ ಕರ್ನಾಟಕದಲ್ಲಿ ಯಾವುದೇ ಮೂಲಸೌಕರ್ಯ ಕಾಮಗಾರಿ ಆರಂಭವಾಗದಿರುವುದು ಜನರ ಅನುಭವಕ್ಕೆ ಬಂದಿದೆ. ನೀರಾವರಿ ಯೋಜನೆಗಳು ಸೇರಿದಂತೆ ಪ್ರಮುಖ ಯೋಜನೆ ಕೈಗೆತ್ತಿಕೊಳ್ಳಲು



ಸರಕಾರ ಮುಂದಾಗಿಲ್ಲ ಎಂದು ಆರೋಪಿಸಿದ್ದಾರೆ.

ನಮ್ಮ ಅವಧಿಯಲ್ಲಿ ಹೊಸದಾಗಿ 7 ವಿಶ್ವವಿದ್ಯಾಲಯ ಪ್ರಾರಂಭಿಸಿದ್ದೆವೆ. ಅನುದಾನ ಕೊರತೆಯ ನೆಪ ಹೇಳಿ ಈ ವಿವಿಗಳನ್ನು ಮುಚ್ಚಲು ಮುಂದಾಗಿದ್ದರಿಂದ ಹಿಂದುಳಿದ ಜಿಲ್ಲೆಗಳ ಬಡ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತದೆ. ಹಾಗಾಗಿ, ಈ ವಿವಿಗಳನ್ನು ಬಂದ್ ಮಾಡುವ ಪ್ರಸ್ತಾವ ಕೈಬಿಡಬೇಕು ಎಂದು ಆಗ್ರಹಿಸಿದ್ದಾರೆ.

**ಬೊಮ್ಮಾಯಿ ಪತ್ರದ ಪ್ರಮುಖಾಂಶ :** ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ-3ರ ಅಡಿ 130 ಟಿಎಂಸಿ ಅಡಿ ನೀರು ಬಳಕೆಗೆ ನಮ್ಮ ಸರಕಾರ ಪ್ರಾರಂಭಿಸಿದ್ದ ಪುನರ್ವಸತಿ ಮತ್ತು ಪುನರ್ ನಿರ್ಮಾಣಕ್ಕೆ ಈ ವರ್ಷ ಒಂದು ರೂಪಾಯಿಯನ್ನೂ ಬಿಡುಗಡೆ ಮಾಡಿಲ್ಲ. ಇದು ಉತ್ತರ ಕರ್ನಾಟಕದ ಬಗ್ಗೆ ಸರಕಾರದ ಅಸಡ್ಡೆಯನ್ನು ತೋರಿಸುತ್ತದೆ.

ಮಹದಾಯಿ ಡಿಪಿಆರ್‌ಗೆ ಕೇಂದ್ರ ಅನುಮೋದಿಸಿದೆ. ಅರಣ್ಯ ಇಲಾಖೆ ಅನುಮತಿ ಸಂಬಂಧ ತೆಗೆದುಕೊಂಡ ಕ್ರಮದ ಬಗ್ಗೆ ವಿವರಣೆ ನೀಡಿಲ್ಲ. ಈ ಯೋಜನೆ ಬಗ್ಗೆ ಆಸಕ್ತಿ ಇಲ್ಲವೆನ್ನುವುದು ಇದರಿಂದ ಗೊತ್ತಾಗುತ್ತದೆ.

ತುಂಗಭದ್ರಾ ಸಮತೋಲನ ಜಲಾಶಯ ನಿರ್ಮಾಣಕ್ಕೆ ನಮ್ಮ ಸರಕಾರ ಡಿಪಿಆರ್ ಸಿದ್ಧಪಡಿಸಿದೆ. ತಕ್ಷಣವೇ ನೆರೆ ರಾಜ್ಯಗಳೊಂದಿಗೆ ಮಾತನಾಡಿ ಯೋಜನೆ ಜಾರಿಗೆ ಕ್ರಮ ವಹಿಸಬೇಕು.



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕಿನ ತಿಮ್ಮಾಪೂರ ಗ್ರಾಮದ ಶ್ರೀ ಮಾರುತೇಶ್ವರ ದೇವರ ಕಾರ್ತಿಕೋತ್ಸವ ಕಾರ್ಯಕ್ರಮವು ಸೋಮವಾರ ವಿಜ್ರಂಭಣೆಯಿಂದ ನೆರವೇರಿತು. ಬೆಳಿಗ್ಗೆ ಶ್ರೀದೇವರಿಗೆ ಪಂಚಾಮೃತ ಅಭಿಷೇಕ, ರುದ್ರಾಭಿಷೇಕ, ಕುಂಕುಮಾರ್ಚನೆ ಸಲ್ಲಿಸಲಾಯಿತು. ರಾತ್ರಿ 9 ಗಂಟೆಗೆ ಪಲ್ಲಕ್ಕಿ ಉತ್ಸವದ ಬಳಿಕ ಸಕಲ ಮಂಗಳ ವಾದ್ಯಗಳ ಸಂಗಮದೊಂದಿಗೆ, ಸಾವಿರಾರು ಭಕ್ತರು ಜಯಘೋಷ ಕೂಗುತ್ತಾ 25 ಸಾವಿರ ದೀಪಗಳನ್ನು ಹಚ್ಚುವ ಮೂಲಕ ಕಾರ್ತಿಕೋತ್ಸವನ್ನು ಆಚರಿಸಿದರು.

## ಜಿಎಸ್‌ಟಿ ಎರಡನೇ ತಿದ್ದುಪಡಿ ಮಸೂದೆಗೆ ಲೋಕಸಭೆ ಅಂಗೀಕಾರ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಜಿಎಸ್‌ಟಿ ಮೇಲ್ಮನವಿ ನ್ಯಾಯಾಧಿಕರಣದ ಅಧ್ಯಕ್ಷರು ಮತ್ತು ಸದಸ್ಯರ ವಯೋಮಿತಿಯನ್ನು ಹೆಚ್ಚಿಸುವ ಜಿಎಸ್‌ಟಿ ಎರಡನೇ ತಿದ್ದುಪಡಿ ಮಸೂದೆಯನ್ನು ಮಂಗಳವಾರ ಲೋಕಸಭೆಯಲ್ಲಿ ಅಂಗೀಕರಿಸಲಾಗಿದೆ.

ಇಂದು ಲೋಕಸಭೆಯಲ್ಲಿ ಮಸೂದೆ ಮಂಡಿಸಿ ಮಾತನಾಡಿದ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು, ವಿವಿಧ ಹೈಕೋರ್ಟ್‌ಗಳು ಅಥವಾ ಸುಪ್ರೀಂ ಕೋರ್ಟ್‌ಗಳಲ್ಲಿ ಜಿಎಸ್‌ಟಿ ಬೇಡಿಕೆಗಳ ವಿರುದ್ಧ ದಾವೆ ಹೂಡುತ್ತಿರುವ ತೆರಿಗೆದಾರರು ತಮ್ಮ ಪ್ರಕರಣಗಳನ್ನು ಹಿಂಪಡೆದು, ಜಿಎಸ್‌ಟಿ ಮೇಲ್ಮನವಿ ನ್ಯಾಯಾಧಿಕರಣ ಸಂಪರ್ಕಿಸಲು ಸ್ವತಂತ್ರರಾಗಿರುತ್ತಾರೆ ಎಂದು ಹೇಳಿದರು.

ಕೇಂದ್ರ ಸರಕು ಮತ್ತು ಸೇವಾ ತೆರಿಗೆ(ಎರಡನೇ ತಿದ್ದುಪಡಿ) ಮಸೂದೆ 2023 ಅನ್ನು



ಲೋಕಸಭೆಯಲ್ಲಿ ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು.

ಮಸೂದೆಯು ಜಿಎಸ್‌ಟಿ ಮೇಲ್ಮನವಿ ನ್ಯಾಯಾಧಿಕರಣ (ಜಿಎಸ್‌ಟಿಎಟಿ)ದ ಅಧ್ಯಕ್ಷರು ಮತ್ತು ಸದಸ್ಯರ ವಯಸ್ಸಿನ ಮಿತಿಯನ್ನು ಕ್ರಮವಾಗಿ 70 ವರ್ಷ ಮತ್ತು 67 ವರ್ಷಗಳಿಗೆ ಹೆಚ್ಚಿಸಲು ಅವಕಾಶ ನೀಡುತ್ತದೆ. ಈ ಹಿಂದೆ ಅಧ್ಯಕ್ಷರಿಗೆ 67 ವರ್ಷ ಮತ್ತು ಸದಸ್ಯರಿಗೆ 65 ವರ್ಷ ನಿಗದಿಪಡಿಸಲಾಗಿತ್ತು.

ಪರೋಕ್ಷ ತೆರಿಗೆಗಳಿಗೆ ಸಂಬಂಧಿಸಿದ ವಿಷಯಗಳ ದಾವೆಯಲ್ಲಿ 10 ವರ್ಷಗಳ 'ಗಣನೀಯ ಅನುಭವ' ಹೊಂದಿರುವ ವಕೀಲರು ಜಿಎಸ್ ಟಿ ಮೇಲ್ಮನವಿ ನ್ಯಾಯಾಧಿಕರಣದ ಸದಸ್ಯರಾಗಿ ನೇಮಕಗೊಳ್ಳಲು ಅರ್ಹರಾಗಿರುತ್ತಾರೆ.

ಈ ತಿದ್ದುಪಡಿಯ ಪ್ರಕಾರ, ಜಿಎಸ್‌ಟಿಎಟಿಯ ಅಧ್ಯಕ್ಷರು ಮತ್ತು ಸದಸ್ಯರು ನಾಲ್ಕು ವರ್ಷ ಅಥವಾ ಕ್ರಮವಾಗಿ 70 ವರ್ಷ ಮತ್ತು 67 ವರ್ಷ ವಯಸ್ಸಿನವರೆಗೆ ಅಧಿಕಾರವನ್ನು ಹೊಂದಿರುತ್ತಾರೆ.

## ಮೂಲಸೌಕರ್ಯಗಳ ಕೊರತೆ, ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳ ಪ್ರತಿಭಟನೆ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾನಿಲಯದ ಆವರಣದಲ್ಲಿ ಮೂಲಸೌಕರ್ಯಗಳ ಕೊರತೆ ಹಾಗೂ ಆಡಳಿತ ಮಂಡಳಿ ಕ್ರಮ ಕೈಗೊಳ್ಳದಿರುವುದನ್ನು ಖಂಡಿಸಿ ವಿದ್ಯಾರ್ಥಿಗಳು ಸೋಮವಾರ ಕುಲಪತಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಶೌಚಾಲಯದಿಂದ ದುರ್ವಾಸನೆ, ಕುಡಿಯುವ ನೀರಿನ ಸೌಲಭ್ಯವಿಲ್ಲ, ಶೌಚಾಲಯದಲ್ಲಿ ನೀರು ಇಲ್ಲ ಎಂದು ವಿದ್ಯಾರ್ಥಿಗಳು ದೂರಿದರು. ಮೂಲಭೂತ ಸೌಕರ್ಯಗಳ ಹೊರತಾಗಿ, ವಿಶ್ವವಿದ್ಯಾಲಯದ ಕಡೆಯಿಂದ ಆಗುತ್ತಿರುವ ಶೈಕ್ಷಣಿಕ ನಿರ್ಲಕ್ಷ್ಯವನ್ನು ಎತ್ತಿ ತೋರಿಸಿದರು ಮತ್ತು ಕಳೆದ ಮೂರು ವಾರಗಳಿಂದ ತರಗತಿಗಳು ನಡೆಯುತ್ತಿಲ್ಲ, ಇದು ಅವರ ಕಲಿಕೆಯ ಮೇಲೆ ಪರಿಣಾಮ ಬೀರುತ್ತಿದೆ ಎಂದು ಹೇಳಿದರು.

ಎಂಟು ದಿನಗಳಲ್ಲಿ ಬಹುತೇಕ ಸಮಸ್ಯೆಗಳನ್ನು ಪರಿಹರಿಸಲಾಗುವುದು ಎಂದು ಕುಲಪತಿ ಎಲ್. ಗೋಮತಿದೇವಿ ವಿದ್ಯಾರ್ಥಿಗಳಿಗೆ ಭರವಸೆ ನೀಡಿದರು. ಕ್ಲಸ್ಟರ್ ವಿಶ್ವವಿದ್ಯಾನಿಲಯ ಮಹಾರಾಣಿ ಕಲೆ, ವಿಜ್ಞಾನ, ವಾಣಿಜ್ಯ, ನಿರ್ವಹಣಾ ಕಾಲೇಜು ಮತ್ತು ಗೃಹ ವಿಜ್ಞಾನ ಕಾಲೇಜುಗಳನ್ನು ಒಳಗೊಂಡಿದೆ.

## ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ನಳನಳಿಸುತ್ತಿದೆ ಕನ್ನಡ ಲಾಂಛನ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸೂಚನೆ ಬೆನ್ನಲ್ಲೇ ಎಚ್ಚೆತ್ತ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಅಧಿಕಾರಿಗಳು ನಿಲ್ದಾಣದ ಲಾಂಛನದಲ್ಲಿ ಕನ್ನಡವನ್ನು ಬಳಸಿಕೊಂಡಿದ್ದಾರೆ.

ಕೆಂಪೇಗೌಡ ಅಂತಾರಾಷ್ಟ್ರೀಯ ನಿಲ್ದಾಣದ ಲಾಂಛನವು ಸಂಪೂರ್ಣ ಆಂಗ್ಲ ಭಾಷೆಯಲ್ಲಿತ್ತು. ಈ ಬಗ್ಗೆ ತಮ್ಮ ಗಮನಕ್ಕೆ ಬರುತ್ತಿದ್ದಂತೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ್ ತಂಗಡಗಿ ಅವರು ವಿಮಾನ ನಿಲ್ದಾಣದ ಅಧಿಕಾರಿಗಳಿಗೆ ಪತ್ರ ಬರೆಯುವಂತೆ ಪ್ರಾಧಿಕಾರಕ್ಕೆ ಸೂಚಿಸಿದ್ದರು.

ಅದರಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ ಸಂತೋಷ್ ಹಾನಗಲ್ ಅವರು ವಿಮಾನ ನಿಲ್ದಾಣದ ವ್ಯವಸ್ಥಾಪಕ ನಿರ್ದೇಶಕರಿಗೆ ಪತ್ರ ಬರೆದು, ವಿಮಾನ ನಿಲ್ದಾಣದ ಲಾಂಛನ ಆಂಗ್ಲ ಭಾಷೆಯಲ್ಲಿದ್ದು, ಕನ್ನಡ ಭಾಷೆಯನ್ನು ನಿರ್ಲಕ್ಷ್ಯ ಮಾಡಲಾಗಿದೆ.

ಕರ್ನಾಟಕದಲ್ಲಿ ಕಾರ್ಯ ನಿರ್ವಹಿಸುವ ಎಲ್ಲ ಸಂಸ್ಥೆಗಳು ಇಲ್ಲಿನ ಭಾಷಾ ಸಂಸ್ಕೃತಿ ಗೌರವಿಸುವುದು ಪ್ರಾಥಮಿಕ ಜವಾಬ್ದಾರಿ. ಕೂಡಲೇ ಲಾಂಛನದಲ್ಲಿ ಕನ್ನಡ ಭಾಷೆಯನ್ನು ಅಳವಡಿಸಿಕೊಳ್ಳಲು ಕ್ರಮಕೈಗೊಳ್ಳುವಂತೆ ಸೂಚಿಸಿದ್ದರು.

ಪ್ರಾಧಿಕಾರದ ಕಾರ್ಯದರ್ಶಿ ಪತ್ರ ತಲುಪುತ್ತಿದ್ದಂತೆ ಎಚ್ಚೆತ್ತ ವಿಮಾನ ನಿಲ್ದಾಣದ ಅಧಿಕಾರಿಗಳು ತಮ್ಮ ಲಾಂಛನದಲ್ಲಿ ಕನ್ನಡ ಭಾಷೆಯನ್ನು ಬಳಸಿದ್ದಾರೆ.

## ಕೃಷಿ ತಂತ್ರಜ್ಞಾನ, ವೈಜ್ಞಾನಿಕ ನೀರು ಬಳಕೆಯ ತರಬೇತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಐ.ಸಿ.ಎ.ಆರ್–ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿ, ಮಲಪ್ರಭಾ ಮತ್ತು ಘಟಪ್ರಭಾ ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ಬೆಳಗಾವಿ ಇವರ ಸಹಯೋಗದೊಂದಿಗೆ ಕೃಷಿ ತಂತ್ರಜ್ಞಾನ ಹಾಗೂ ವೈಜ್ಞಾನಿಕ ನೀರು ಬಳಕೆಯ ಕುರಿತು ರೈತರಿಗೆ 2 ದಿನಗಳ ತರಬೇತಿ ಕಾರ್ಯಕ್ರಮ ಆಯೋಜಿಸಲಾಯಿತು.

ಭೂ ಅಭಿವೃದ್ಧಿ ಅಧಿಕಾರಿ ಡಾ. ಶಿವಪ್ರಸಾದ ಗಾಂವಕರ ಕಾರ್ಯಕ್ರಮ ಉದ್ಘಾಟಿಸಿ, ತಮ್ಮ ಪ್ರಾಧಿಕಾರದ ಇತಿಹಾಸ, ಉದ್ದೇಶ ಹಾಗೂ ಚಟುವಟಿಕೆಗಳ ಕುರಿತು ಮಾಹಿತಿ ನೀಡಿ, ನೀರಿನ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ರೈತರಿಗೆ ತಿಳಿಸಿದರು.

ಅತಿಥಿಗಳಾಗಿ ಪಾಲ್ಗೊಂಡ ಸಹಾಯಕ ಕೃಷಿ ನಿರ್ದೇಶಕಿ ಡಾ. ಸುಚೇತಾ ಹೆಬ್ಬಳ್ಳಿ, ಮಣ್ಣಿನ ಪರೀಕ್ಷೆ, ಸಮಸ್ಯಾತ್ಮಕ ಮಣ್ಣಿನ ನಿರ್ವಹಣೆ, ಬೆಳೆ ಪರಿವರ್ತನೆ, ಬೆಳೆ ವೈವಿಧ್ಯತೆ, ಸಮಗ್ರ ಕೃಷಿ ಪದ್ಧತಿಗಳ ಕುರಿತು ಮಾಹಿತಿ ನೀಡಿದರು. ನಿವೃತ್ತ ವಿಜ್ಞಾನಿ ಎಸ್.ಎಚ್. ಆದಾಪೂರ ನೀರು ಬಳಕೆದಾರರ ಸಹಕಾರಿ ಸಂಘಗಳು, ಹಂಚಿಕೆ ಹಾಗೂ ಯೋಜನಾ ಮಟ್ಟದ ಮಹಾಮಂಡಳಗಳ ಪಾತ್ರ, ನೀರಾವರಿ ರೈತರ ಹಕ್ಕು ಹಾಗೂ ಜವಾಬ್ದಾರಿ, ಕೃಷಿ ಮಾರುಕಟ್ಟೆ ವಿಧಾನಗಳ ಬಗ್ಗೆ ಮಾಹಿತಿ ನೀಡಿದರು. ಇನ್ನೋರ್ವ ನಿವೃತ್ತ ವಿಜ್ಞಾನಿವಿ.ಡಿ. ವೈಕುಂಠೆ ನೀರಾವರಿಯಲ್ಲಿ ಕೃಷಿ ಬೆಳೆ ಬೆಳೆಯಲು ಅಳವಡಿಸಿಕೊಳ್ಳಬೇಕಾದ ಸಮಗ್ರ ಬೇಸಾಯ ಕ್ರಮಗಳ ಕುರಿತು ಮಾಹಿತಿ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಕೆವಿಕೆ ಮುಖ್ಯಸ್ಥೆ ಡಾ. ಸುಧಾ ವಿ.ಮಂಕಣಿ ಮಣ್ಣು ಮತ್ತು ನೀರಿನ ಸಂರಕ್ಷಣೆ, ಕಡಿಮೆ ನೀರಿನಲ್ಲಿ ಬೆಳೆಯಬಹುದಾದ ಬೆಳೆಗಳು ಮತ್ತು ಸಿರಿಧಾನ್ಯ ಕೃಷಿಯ ಕುರಿತು ವಿವರಿಸಿದರು. ಎನ್.ಎಚ್. ಭಂಡಿ ಸ್ವಾಗತಿಸಿದರು. ಡಾ. ವಿನಾಯಕ ನಿರಂಜನ ಕಾರ್ಯಕ್ರಮ ನಿರೂಪಿಸಿದರು. ಹೇಮಾವತಿ ಹಿರೇಗೌಡರ ವಂದಿಸಿದರು. ರೋಣ ತಾಲೂಕಿನ ಮೆಣಸಗಿ ಗ್ರಾಮದ 50 ರೈತರು ತರಬೇತಿಯಲ್ಲಿ ಭಾಗವಹಿಸಿದ್ದರು.

## ಸಂವಿಧಾನದ ಮೂಲ ಆಶಯ ಸಾಕಾರಗೊಳ್ಳಲಿ

▶▶ಮೊದಲನೇ ಪುಟದಿಂದ

ನಗರದಲ್ಲಿ ಮೂಲಭೂತ ಸೌಕರ್ಯ, ಸೌಲಭ್ಯ ಕೇಂದ್ರೀಕೃತವಾಗುತ್ತಿದೆ. ಇದು ಹಳ್ಳಿಗಳಿಗೂ ತಲುಪಬೇಕು. ಗ್ರಾಮಗಳಲ್ಲಿ ಜರುಗುವ ಸಭೆಗಳು ಸರ್ವಶಕ್ತವಾಗಿ ನಡೆಯಬೇಕು ಹಾಗೂ ಅಲ್ಲಿನ ತೀರ್ಮಾನಗಳು ಸರಿಯಾಗಿ ಅನುಷ್ಠಾನವಾಗುವ ಮೂಲಕ ಹಳ್ಳಿಗಳ ಸಶಕ್ತೀಕರಣ ಸಾಧ್ಯ ಎಂದರು.

ರಾಮಕೃಷ್ಣಾಶ್ರಮದ ನಿರ್ಭಯಾನಂದ ಸರಸ್ವತಿ ಶ್ರೀಗಳು ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ವೇದಿಕೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ವಿಷ್ಣುಕಾಂತ ಚಟಪಲ್ಲಿ, ನಿವೃತ್ತ ನ್ಯಾಯಾಧೀಶ ಜಿ.ಎಸ್. ಪಲ್ಲೇದ, ಮಾಜಿ ಶಾಸಕರಾದ ಬಿ.ಆರ್. ಯಾವಗಲ್, ಡಿ.ಆರ್. ಪಾಟೀಲ, ಪ್ರಮುಖರಾದ ವಾಸಣ್ಣ ಕುರಡಗಿ, ಗುರಣ್ಣ ಬಳಗಾನೂರ, ಸಿದ್ದು ಪಾಟೀಲ, ಉಮೇಶಗೌಡ ಪಾಟೀಲ, ಪ್ರಾಣೇಶ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಜಿ.ಕೆ. ಜಮಾದಾರ ಕಾರ್ಯಕ್ರಮ ನಿರ್ವಹಿಸಿದರು.

## ಬೆಳಗಾವಿ ಸಂತ್ರಸ್ತ ಮಹಿಳೆಗೆ 2 ಎಕರೆ ಭೂಮಿ, 5 ಲಕ್ಷ ರೂ. ಪರಿಹಾರ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ**



ಬೆಳಗಾವಿ ಜಿಲ್ಲೆಯ ವಂಟಮೂರಿ ಗ್ರಾಮದಲ್ಲಿ ಮಹಿಳೆಯನ್ನು ವಿವಸ್ತ್ರಗೊಳಿಸಿ ಹಲ್ಲೆ ನಡೆಸಿದ್ದ ಪ್ರಕರಣದ ಸಂತ್ರಸ್ತ ಮಹಿಳೆಗೆ ರಾಜ್ಯ ಸರ್ಕಾರ ಮಂಗಳವಾರ ಎರಡು ಎಕರೆ ಭೂಮಿ ಹಾಗೂ ಐದು ಲಕ್ಷ ರೂಪಾಯಿ ಪರಿಹಾರದ ಚೆಕ್ ನೀಡಿದೆ.

ಇಂದು ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಜಿಲ್ಲಾಧಿಕಾರಿ ಕಚೇರಿಯಲ್ಲಿ ಮುಖ್ಯಮಂತ್ರಿಗಳ ನಿಧಿಯಿಂದ 5 ಲಕ್ಷ ರೂ. ಪರಿಹಾರದ ಚೆಕ್ ವಿತರಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸತೀಶ್ ಜಾರಕಿಹೊಳಿ ಅವರು, ಐದು ಲಕ್ಷ ರೂಪಾಯಿ ಜೊತೆಗೆ ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ ಸಂತ್ರಸ್ತ ಮಹಿಳೆಗೆ 2 ಎಕರೆ ಜಮೀನು ಮಂಜೂರು ಮಾಡಲಾಗಿದೆ ಎಂದು ಹೇಳಿದರು.

ರಾಜ್ಯ ಸರ್ಕಾರ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸುವ ಮುನ್ನವೇ ಪೊಲೀಸರು ಆರೋಪಿಗಳನ್ನು ಬಂಧಿಸಿದ್ದಾರೆ. ಆದರೂ ಪ್ರಕರಣವನ್ನು ಸರ್ಕಾರ ಸಿಐಡಿಗೆ ಒಪ್ಪಿಸಿದೆ. ತನಿಖೆ ಬಗ್ಗೆ ಯಾವುದೇ ಸಂಶಯ ಬೇಡ ಎಂದು ಸಿಐಡಿಗೆ ಕೊಟ್ಟಿದ್ದಾರೆ. ಇಂತಹದೊಂದು ಘಟನೆ ಆಗಬಾರದಿತ್ತು. ಆದರೆ ನಮ್ಮ ಭಾಗದಲ್ಲಿ ಆಗಿದೆ. ಮುಂದೆ ಇಂತಹ ಘಟನೆ ಆಗದಂತೆ ನೋಡಿಕೊಳ್ಳೋಣ ಎಂದರು.

## ನಾಳೆ ಪೂರ್ವಭಾವಿ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದನ್ವಯ 1-1-2024ರಂದು ಆಚರಿಸಲಾಗುವ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ನಿಮಿತ್ತ ಡಿ. 21 ರಂದು ಬೆಳಿಗ್ಗೆ 11 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ.

ಸಭೆಗೆ ಹಾಜರಾಗಿ ಸಲಹೆ/ ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಧನ ವಾರ್ತೆ



### ನಿಜಲಿಂಗಪ್ಪ ವೀರಪ್ಪ ಅಂಬಕ್ಕಿ

ಲಕ್ಕುಂಡಿ: ಇಲ್ಲಿಯ ಅಂಬಕ್ಕಿಯವರ ಓಣಿಯ ನಿವಾಸಿ ನಿಜಲಿಂಗಪ್ಪ ವೀರಪ್ಪ ಅಂಬಕ್ಕಿ (72) ಮಂಗಳವಾರ ನಿಧನರಾದರು. ಮೃತರು ಪತ್ನಿ, ಪುತ್ರ, ಏಳು ಜನ ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.



### ಅನಸೂಯಾ ಪಾಟೀಲ

ಗದಗ: ಮುಂಡರಗಿ ತಾಲೂಕಿನ ಬಾಗೇವಾಡಿ ಗ್ರಾಮದ ನಿವಾಸಿ ಅನಸೂಯಾ ಸಣ್ಣಸಿದ್ದನಗೌಡ ಪಾಟೀಲ (78) ಮಂಗಳವಾರ ನಿಧನರಾದರು. ಮೃತರು ಪತಿ, ಮಕ್ಕಳು, ಅಳಿಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಡಿ. 20ರಂದು ಮಧ್ಯಾಹ್ನ 12ಕ್ಕೆ ನೆರವೇರಲಿದೆ.

### ಗದಗ ಗ್ರೇನ್ ಮಾರುಕಟ್ಟೆಯಲ್ಲಿ 'ಅಪರಾಧ ತಡೆ ಮಾಸಾಚರಣೆ' ಕಾರ್ಯಕ್ರಮ

# ಸಾರ್ವಜನಿಕರಲ್ಲಿ ಮುಂಜಾಗ್ರತೆ ಅತ್ಯಗತ್ಯ

**■ವಿಜಯಸಾಕ್ಷಿ ಸುದ್ದಿ, ಗದಗ**



ಸಾರ್ವಜನಿಕರು ಸ್ವಯಂ ಜಾಗ್ರತಿ, ಮುಂಜಾಗ್ರತಾ ಕ್ರಮ ಕೈಗೊಳ್ಳುವುದರಿಂದ ಎಷ್ಟೋ ಅಪರಾಧಗಳನ್ನು ತಡೆಗಟ್ಟಬಹುದಾಗಿದೆ ಎಂದು ಗದಗ ಶಹರ ಸಿಪಿಐ ಡಿ.ಬಿ. ಪಾಟೀಲ ಅಭಿಪ್ರಾಯಪಟ್ಟರು.

ಅವರು ಗದಗ ಗ್ರೇನ್ ಮಾರುಕಟ್ಟೆಯಲ್ಲಿ ಹಣ್ಣು, ಹೂವು, ಎಲೆ ಹಾಗೂ ಇತರೆ ವ್ಯಾಪಾರಸ್ಥರ ಸಂಘ, ಗದಗ ಜಿಲ್ಲಾ ಪೊಲೀಸ್, ಗದಗ ಶಹರ ಪೊಲೀಸ್ ಠಾಣೆ ವತಿಯಿಂದ ಏರ್ಪಡಿಸಿದ್ದ ಅಪರಾಧ ತಡೆ ಮಾಸಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಇಂಟರ್‌ನೆಟ್, ಆನ್‌ಲೈನ್ ವ್ಯವಹಾರಗಳಿಂದಾಗಿ ಸೈಬರ್ ಕ್ರೈಮ್‌ಗಳು ಹೆಚ್ಚುತ್ತಿವೆ. ವಿದ್ಯಾವಂತರು, ಪದವೀಧರರೂ ಸಹ ಆಸೆ, ಆಮಿಷಕ್ಕೆ ಅಥವಾ ಅತಿಯಾದ ಬುದ್ಧಿವಂತಿಕೆಯಿಂದಾಗಿಯೂ ಮೋಸಕ್ಕೆ ಬಲಿಯಾಗುತ್ತಿರುವದು ದೊಡ್ಡ ದುರಂತ ಎಂದರು.

ವ್ಯಾಪಾರಸ್ಥರ ಅಂಗಡಿ-ಮನೆ ಕಳ್ಳತನ ತಡೆಗಟ್ಟುವ ಬಗ್ಗೆ, ಮನೆ ಬಾಡಿಗೆ ಕೊಡುವಾಗ ಪಾಲಿಸಬೇಕಾದ ಕ್ರಮಗಳು, ಸರಗಳ್ಳತನ ತಡೆಗಟ್ಟಲು ಪಾಲಿಸಬೇಕಾದ ಕ್ರಮಗಳು, ವಾಹನ ಕಳ್ಳತನ ತಡೆಗಟ್ಟಲು ಪಾಲಿಸಬೇಕಾದ ಕ್ರಮಗಳನ್ನು ವಿವರಿಸಿದ ಅವರು, ಉದ್ಯೋಗ, ಆನ್‌ಲೈನ್ ವ್ಯವಹಾರ, ಬಹುಮಾನ, ಲಾಟರಿ ಎಂದೆಲ್ಲಾ ಹೇಳಿ ಮೊಬೈಲ್‌ನಲ್ಲಿ ವ್ಯವಹರಿಸಿ, ಬ್ಯಾಂಕ್ ಖಾತೆಯ ಹಣವನ್ನೆಲ್ಲ ಕಳೆದುಕೊಂಡು ಮೋಸ ಹೋಗುತ್ತಿರುವದು ವಿಷಾದದ ಸಂಗತಿ. ಸಾರ್ವಜನಿಕರು ಸ್ವಯಂ ಜಾಗ್ರತಿ, ಮುಂಜಾಗ್ರತಾ ಕ್ರಮ ಕೈಗೊಳ್ಳುವದು ಅವಶ್ಯವೆಂದರು.

ಪಾಲಕ-ಪೋಷಕರು ಮಕ್ಕಳಿಗೆ ಮೊಬೈಲ್ ಕೊಡಬಾರದು. ಅನಿವಾರ್ಯವಾಗಿ ಕೊಟ್ಟರೆ- ಕೊಡಿಸಿದರೆ ಅವರ ಮೊಬೈಲ್‌ಗಳ ಮೇಲೆ ನಿಗಾ ಇಡಬೇಕು. ಅವರ ಸಂಪರ್ಕಗಳ ಮಾಹಿತಿ ಇರಬೇಕು, ಮಕ್ಕಳ ಚಲನವಲನವನ್ನು ಸೂಕ್ಷ್ಮವಾಗಿ ಗಮನಿಸಬೇಕು.

ಇಲ್ಲವಾದರೆ ಮುಂದೊಂದು ದಿನ ಪಶ್ಚಾತ್ತಾಪ ಪಡಬೇಕಾಗುತ್ತದೆ. ಆಗ ಕಾಲ ಮಿಂಚಿ ಹೋಗಿರುತ್ತದೆ, ಏನೂ ಮಾಡಲಾಗದು ಎಂದು ಎಚ್ಚರಿಕೆ ನೀಡಿದರಲ್ಲದೆ, ಯುವಕ-ಯುವತಿಯರು ವಾಟ್ಸಪ್, ಫೇಸ್‌ಬುಕ್‌ನಲ್ಲಿ ಅಪರಿಚಿತರ ಗೆಳೆತನ ಮಾಡಿ ಆಕರ್ಷಣೆಗೆ ಒಳಗಾಗಿ ಜೀವನ ಹಾಳು ಮಾಡಿಕೊಳ್ಳಬೇಡಿ ಎಂದರು.

ವೇದಿಕೆಯ ಮೇಲೆ ಗದಗ ಶಹರ ಪೊಲೀಸ್ ಠಾಣೆಯ ಅಪರಾಧ ವಿಭಾಗದ ಪಿಎಸ್‌ಐ ಜಿ.ಟಿ. ಜಕ್ಕಲಿ, ಟ್ರಾಫಿಕ್ ಪಿಎಸ್‌ಐಗಳಾದ ಶಕುಂತಲಾ ನಾಯಕ, ಭಾರತಿ ತಳವಾರ, ಭಾರತಿ ಬಂಕಾಪೂರ, ವ್ಯಾಪಾರಸ್ಥರ ಸಂಘದ ಗೌರವಾಧ್ಯಕ್ಷ ಶರಣಪ್ಪ ಸಾಸನೂರ, ಅಧ್ಯಕ್ಷ ಅಬ್ದುಲ್‌ರೆಹಮಾನ ಹುಯಿಲಗೋಳ, ಉಪಾಧ್ಯಕ್ಷ ರಾಜೇಸಾಬ ಅಡರಕಟ್ಟಿ, ಕಾರ್ಯದರ್ಶಿ ಶರಣು ಶಿಗ್ಲಿ, ಸಹಕಾರ್ಯದರ್ಶಿ ಮೀರಅಲಿ ಢಾಲಾಯತ, ಸದಸ್ಯರಾದ ಎ.ಎನ್. ಅನ್ಸಾರಿ, ರಿಯಾಜ ಅನ್ವರ್ ಖಾಜಿ, ವಿಜಯಕುಮಾರ ಬಾಗಮಾರ, ಗಣಪತಿ ಪಟಗೆ, ವೆಂಕಟರಮನ್ ಗುತ್ತಲ, ಮಹ್ಮದ್‌ಅಲಿ ರೋಣ, ಅಶ್ರಫ್‌ಅಲಿ ನಸಬಿ, ಅಜ್ಜಣ್ಣ ಮುಧೋಳ, ಪಿ.ಎಸ್. ಅರಸಿದ್ದಿ, ಅಶೋಕ ಭಾಂಡಗೆ, ಪರವೇಜ್ ಬೇಲೇರಿ, ತಿಪ್ಪಣ್ಣ ನೋನಾರೆ, ಮಂಜು ಲಕ್ಕುಂಡಿ, ಯಲ್ಲವ್ವ ಉಳ್ಳಿಕಾಶಿ, ಮಹ್ಮದ್‌ಅಲಿ ತಂಬಾಕದ, ರಿಯಾನ್ ಕಾಟಾಪೂರ ಉಪಸ್ಥಿತರಿದ್ದರು.

ವ್ಯಾಪಾರಸ್ಥರು ಪೊಲೀಸ್ ಅಧಿಕಾರಿಗಳನ್ನು ಸನ್ಮಾನಿಸಿ ಗೌರವಿಸಿದರು. ಅಬ್ದುಲ್‌ರೆಹಮಾನ ಹುಯಿಲಗೋಳ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

> ವಾಹನ ಚಾಲಕರಿಗೆ ಹೆಲ್ಮೆಟ್, ಸೀಟ್ ಬೆಲ್ಟ್, ಯುನಿಫಾರ್ಮ್ ಪರಿಶೀಲಿಸಲು 'ಥರ್ಡ್ ಐ' ಸಿಸಿ ಕ್ಯಾಮರಾಗಳು ಅತ್ಯಂತ ಸೂಕ್ಷ್ಮವಾಗಿ ಕೆಲಸ ಮಾಡುವ ಮೂಲಕ ಪೊಲೀಸರೊಂದಿಗೆ ವಾದಿಸುವ, ದಂಡ ಕಡಿಮೆ ಮಾಡಿಸುವ ಪ್ರಮೇಯ ಇಲ್ಲವಾಗಿದೆ. ತಪ್ಪು ಮಾಡಿದವರ ಮನೆ ಬಾಗಿಲಿಗೆ ದಂಡದ ಪತ್ರ ಹೋಗುತ್ತಿವೆ. ತಪ್ಪಿತಸ್ಥರು ದಂಡ ತುಂಬಲು ಠಾಣೆಯಲ್ಲಿ ಸರದಿಯಲ್ಲಿದ್ದಾರೆ. ವಾಹನ ಚಾಲಕರಲ್ಲಿ ಕ್ರಮೇಣ ಜಾಗ್ರತಿ ಬರುತ್ತಿದೆ. 'ಥರ್ಡ್ ಐ'ನಿಂದ ಗುಣಾತ್ಮಕ ಬದಲಾವಣೆ ಕಾಣುತ್ತಿದೆ.
>
> **– ಶಕುಂತಲಾ ನಾಯಕ.**
> **ಸಂಚಾರ ಠಾಣೆ ಪಿಎಸ್‌ಐ.**

## ಪಂಚಲಿಂಗೇಶ್ವರ ದೇವಸ್ಥಾನದಲ್ಲಿ ಕಾರ್ತಿಕೋತ್ಸವ



**■ವಿಜಯಸಾಕ್ಷಿ ಸುದ್ದಿ, ಗದಗ**

ಮನುಷ್ಯನಲ್ಲಿರುವ ಅಜ್ಞಾನವೆಂಬ ಕಗ್ಗತ್ತಲೆಯನ್ನು ಹೊಡೆದೋಡಿಸಲು ಸುಜ್ಞಾನವೆಂಬ ದೀಪ ಹಚ್ಚಬೇಕು. ಅದಕ್ಕೆ ಗುರುವಿನ ಉಪದೇಶ ಅವಶ್ಯವಾಗಿ ಬೇಕೆಂದು ಹಿರಿಯ ಸಾಹಿತಿ ಐ.ಕೆ. ಕಮ್ಮಾರ ಹೇಳಿದರು.

ಅವರು ತಾಲೂಕಿನ ಹಿರೇಹಂದಿಗೋಳ ಗ್ರಾಮದ ಪಂಚಲಿಂಗೇಶ್ವರ ದೇವರ ದೀಪೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿ, ಸಿದ್ಧಿ ಪುರುಷರಾಗಿದ್ದ ಮಣಕವಾಡದ ಲಿಂ. ಮೃತ್ಯುಂಜಯ ಶರಣರು ಈ ಪಂಚಲಿಂಗೇಶ್ವರ ದೇವರ ಬಗ್ಗೆ ಕೊಂಡಾಡಿ, ಜಾಗೃತ ಸ್ಥಳವನ್ನಾಗಿ ಮಾಡಿದ್ದಾರೆ.. ಹೀಗಾಗಿ ಲಿಂ. ಮಣಕವಾಡ ಶ್ರೀಗಳವರ ಪಾದ ಸ್ಪರ್ಶದಿಂದ ಹಿರೇಹಂದಿಗೋಳ ಪಾವನವಾಗಿದೆ ಎಂದ ಅವರು, ಮಕ್ಕಳಿಗೆ ಉತ್ತಮ ಸಂಸ್ಕಾರ, ವಿದ್ಯೆ-ಬುದ್ಧಿ ಕೊಟ್ಟರೆ ಅವರ ಬದುಕು ಬಂಗಾರವಾಗುವುದು ಎಂದರು.

ನಿವೃತ್ತ ಉಪ ತಹಸೀಲ್ದಾರ ಶಿವಪುತ್ರಯ್ಯ ಯಲಬುರ್ಗಿಮಠ ದೀಪೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ದೀಪೋತ್ಸವದ ಪ್ರಯುಕ್ತ ಬೆಳಿಗ್ಗೆ ಪಂಚಲಿಂಗೇಶ್ವರ ದೇವರಿಗೆ ಮಹಾ ರುದ್ರಾಭಿಷೇಕ ಜರುಗಿತು. ನಂತರ ದೇವಸ್ಥಾನದ ಅರ್ಚಕ ಶಿವಪ್ಪ ಹೂಗಾರ ಅವರಿಂದ ವಿಶೇಷ ಪೂಜೆ ಅಲಂಕಾರ ಜರುಗಿತು.

ಪ್ರಾರಂಭದಲ್ಲಿ ರೋಣದ ಸಿಂಚನಾ ನಂದಿಕೋಲಮಠ ಪ್ರಾರ್ಥಿಸಿದರು. ಸಮಾಜ ಸೇವಾ ಕಾರ್ಯಕರ್ತ ಶಿವಶಂಕ್ರಪ್ಪ ಡಿ.ಆರಟ್ಟಿ ಸರ್ವರನ್ನು ಸ್ವಾಗತಿಸಿದರೆ, ಚುಟುಕು ಕವಿ ಮುತ್ತಣ್ಣ ಹೂಗಾರ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ಗ್ರಾಮದ ಪಂಚಲಿಂಗೇಶ್ವರ ಭಜನಾ ಸಂಘದವರಿಂದ ಅಹೋರಾತ್ರಿ ಭಜನೆ ಜರುಗಿತು.

## ಎಸ್‌ಡಿಎಂಸಿ ಅಧ್ಯಕ್ಷರಾಗಿ ನಾಗರಾಜ ಲಕ್ಕುಂಡಿ ಆಯ್ಕೆ




**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪಟ್ಟಣದ ಸಿಸಿಎನ್ ಸರಕಾರಿ ಪ್ರೌಢಶಾಲೆಯ ನೂತನ ಶಾಲಾಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷರಾಗಿ ಪ.ಪಂ ಮಾಜಿ ಅಧ್ಯಕ್ಷ ನಾಗರಾಜ ಲಕ್ಕುಂಡಿ ಆಯ್ಕೆಯಾಗಿದ್ದಾರೆ. ಉಪಾಧ್ಯಕ್ಷೆಯಾಗಿ ಪ್ರಿಯಾಂಕಾ ಉಮರ್ಜಿ, ಸದಸ್ಯರಾಗಿ ಮಹದೇವಪ್ಪ ಮುರಾರಿ, ವಾಜಿದಾ ಮಾರನಬಸರಿ, ಯಲ್ಲವ್ವ ಮದ್ದಿನವರ, ಮಹೇಶ ಕಲ್ಲಪ್ಪನವರ, ರಾಮಣ್ಣ ಕಂಬಳಿ, ನಿಂಗಪ್ಪ ಕಪ್ಪಣ್ಣವರ, ಮಹೇಶ ಕರಿಭರಮಗೌಡ್ರ ಹಾಗೂ ಕಾರ್ಯದರ್ಶಿಯಾಗಿ ಶಾಲೆಯ ಮುಖ್ಯ ಶಿಕ್ಷಕ ಜಿ.ಡಿ. ಈರಕ್ಕನವರ ಆಯ್ಕೆಯಾದರು.

ಈ ಸಂದರ್ಭದಲ್ಲಿ ಸಿ.ಸಿ. ನೂರಶೆಟ್ಟರ, ಡಾ. ಟಿ.ಎಂ. ಮಹೇಂದ್ರಕರ, ಎಚ್.ಎಂ. ದೇವಗಿರಿ, ಬಸವಣ್ಣೆಪ್ಪ ತುಳಿ, ಚನ್ನವೀರಪ್ಪ ಕಲ್ಯಾಣಿ, ಬಸವರಾಜ ಕಲ್ಯಾಣಿ ಮುಂತಾದವರು ಉಪಸ್ಥಿತರಿದ್ದರು.

## ಅಬಕಾರಿ ನೀತಿ ಪ್ರಕರಣ: ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್‌ಗೆ ಇಡಿ ಸಮನ್ಸ್

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ರದ್ದಾದ ಅಬಕಾರಿ ನೀತಿ ಪ್ರಕರಣದ ತನಿಖೆಗೆ ಸಂಬಂಧಿಸಿದಂತೆ ಡಿಸೆಂಬರ್ 21 ರಂದು ವಿಚಾರಣೆಗೆ ಹಾಜರಾಗುವಂತೆ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ಜಾರಿ ನಿರ್ದೇಶನಾಲಯ ಸೋಮವಾರ ಸಮನ್ಸ್ ಜಾರಿ ಮಾಡಿದೆ.

ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಇಂದು ಎರಡನೇ ಬಾರಿ ದೆಹಲಿ ಸಿಎಂಗೆ ಸಮನ್ಸ್ ಜಾರಿ ಮಾಡಿದೆ.

ಈ ಹಿಂದೆ ನವೆಂಬರ್ 2 ರಂದು ಕೇಜ್ರಿವಾಲ್ ಅವರಿಗೆ ಇಡಿ ಸಮನ್ಸ್ ನೀಡಿತ್ತು. ಆದರೆ ಐದು ರಾಜ್ಯಗಳ ವಿಧಾನಸಭೆ ಚುನಾವಣೆಗೆ ಸಂಬಂಧಿಸಿದ ಪೂರ್ವ ನಿಗದಿತ ಕಾರ್ಯಕ್ರಮಗಳನ್ನು ಉಲ್ಲೇಖಿಸಿ ಜಾರಿ ನಿರ್ದೇಶನಾಲಯದ ಮುಂದೆ ವಿಚಾರಣೆಗೆ ಹಾಜರಾಗಲು ದೆಹಲಿ ಸಿಎಂ ನಿರಾಕರಿಸಿದ್ದರು.



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವಿಡಿಎಸ್ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯ ವತಿಯಿಂದ ಒಂದು ದಿನದ ಹೊರಸಂಚಾರವನ್ನು ಹಾವೇರಿ ಜಿಲ್ಲೆಯ ಶಿಗ್ಗಾವಿ ತಾಲೂಕಿನ ಅಗಡಿ ತೋಟಕ್ಕೆ ಹಮ್ಮಿಕೊಳ್ಳಲಾಗಿತ್ತು. ಸಂಸ್ಥೆಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ, ಆಡಳಿತಾಧಿಕಾರಿಗಳಾದ ಡಾ. ಗಂಗೂಬಾಯಿ ಪವಾರ, ಪ್ರತೀಕ ಹುಯಿಲಗೋಳ, ಮುಖ್ಯೋಪಾಧ್ಯಾಯ ಎಂ.ಆರ್. ಡೊಳ್ಳಿನ, ಎಂ.ವಿ. ಹವಾಲ್ದಾರ, ಶಿಕ್ಷಕರು, ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳಿದ್ದರು.

## ಕ್ರೀಡೆಯಿಂದ ದೈಹಿಕ, ಮಾನಸಿಕ ಬಲ ವೃದ್ಧಿ



**■ವಿಜಯಸಾಕ್ಷಿ ಸುದ್ದಿ, ಗದಗ**


ಜಿಲ್ಲಾ ಗೃಹರಕ್ಷಕ ದಳದಿಂದ ಗದಗ ಜಿಲ್ಲಾ ಗೃಹರಕ್ಷರಿಗೆ ಜಿಲ್ಲಾ ಮಟ್ಟದ ಕ್ರೀಡಾಕೂಟವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣಪ್ಪ ಗೋಗೇರಿ ಮಾತನಾಡಿ, ಕ್ರೀಡೆಯಿಂದ ಗೃಹರಕ್ಷಕರ ದೈಹಿಕ ಹಾಗೂ ಮಾನಸಿಕ ಬಲ ಹೆಚ್ಚಿ, ಕೆಲಸ ಮಾಡಲು ಹೆಚ್ಚಿನ ಪ್ರೋತ್ಸಾಹ ಸಿಗುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಗೃಹರಕ್ಷಕ ದಳದ ಸಮಾದೇಷ್ಠ ವಿಶ್ವನಾಥ ಯಳಮಲಿ ಮಾತನಾಡಿ, ಜೀವನದಲ್ಲಿ ನಿತ್ಯವೂ ವ್ಯಾಯಾಮ, ಯೋಗ ಹಾಗೂ ದೈಹಿಕ ಕರಸತ್ತನ್ನು ಅಳವಡಿಸಿಕೊಂಡಾಗ ಆರೋಗ್ಯವಾಗಿ ಹಾಗೂ ಚೈತನ್ಯಪೂರ್ಣರಾಗಿ ಮುನ್ನಡೆಯಬಹುದೆಂದರು.

ವಿಜೇತರಿಗೆ ಡಾ. ಶರಣಪ್ಪ ಗೋಗೇರಿ ಪಾರಿತೋಷಕವನ್ನು ವಿತರಿಸಿದರು. ವೇದಿಕೆಯಲ್ಲಿ ಜಿಲ್ಲಾ ಗೃಹರಕ್ಷಕ ದಳದ ಕೆ.ಸಿ. ವಕ್ಕಳದ, ಕಿರಣಕುಮಾರ ಕಟಗಿ, ಟಿ.ಎಲ್. ರಾಜಕುಮಾರ ಮುಂತಾದವರಿದ್ದರು.

## ತಮಿಳುನಾಡಿಗೆ ನಿತ್ಯ 3128 ಕ್ಯೂಸೆಕ್ ಕಾವೇರಿ ನೀರು ಹರಿಸುವಂತೆ ಸಿಡಬ್ಲ್ಯುಆರ್‌ಸಿ ಆದೇಶ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**



ತಮಿಳುನಾಡಿಗೆ ಡಿಸೆಂಬರ್ ಅಂತ್ಯದವರೆಗೆ ಪ್ರತಿನಿತ್ಯ 3128 ಕ್ಯೂಸೆಕ್ ನೀರು ಹರಿಸುವಂತೆ ಮತ್ತು ಮುಂದಿನ ವರ್ಷ ಜನವರಿಯಲ್ಲಿ ನಿತ್ಯ 1030 ಕ್ಯೂಸೆಕ್ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯುಆರ್‌ಸಿ) ಕರ್ನಾಟಕಕ್ಕೆ ನಿರ್ದೇಶನ ನೀಡಿದೆ.

ರಾಜ್ಯದಲ್ಲಿ ತೀವ್ರ ಮಳೆ ಕೊರತೆಯಿಂದ ಬರಗಾಲ ಆವರಿಸಿದೆ. ಮುಂದೆ ಬರುವ ಬೇಸಿಗೆಗೆ ಜಲಾಶಯಗಳಲ್ಲಿ ಕುಡಿಯುವ ನೀರಿನ ಅಭಾವ ಎದುರಾಗುವ ಸಾಧ್ಯತೆಗಳಿವೆ. ಆದರೂ ತಮಿಳುನಾಡಿಗೆ ಮತ್ತೆ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ಆದೇಶಿಸಿದ್ದು, ರೈತರ ಆಕ್ರೋಶಕ್ಕೆ ಕಾರಣವಾಗಿದೆ.

18-12-2023 ರವರೆಗೆ ಕರ್ನಾಟಕದ ನಾಲ್ಕು ಜಲಾಶಯಗಳಿಗೆ ಒಳಹರಿವಿನ ಕೊರತೆ 52.84 ಪರ್ಸೆಂಟ್ ಇದೆ.

ತಮಿಳುನಾಡಿನ ಕಾವೇರಿ ಜಲಾಯನ ಪ್ರದೇಶದಲ್ಲಿ ಈಶಾನ್ಯ ಮಾನ್ಸೂನ್ ಋತುವಿನಲ್ಲಿ ಸಮತೋಲನ ಮಳೆಯನ್ನು ನಿರೀಕ್ಷಿಸಬಹುದು. ಆದ್ದರಿಂದ ಬೆಳೆದಿರುವ ಬೆಳೆಗಳನ್ನು ಉಳಿಸಿಕೊಳ್ಳಲು ಸಾಕಷ್ಟು ಮಣ್ಣಿನ ತೇವಾಂಶವನ್ನು ತಮಿಳುನಾಡಿನ ಕಾವೇರಿ ಜಲಾನಯನ ಪ್ರದೇಶವು ಹೊಂದಿರುತ್ತದೆ.

ತಮಿಳುನಾಡಿನ ಕುರುವಾಯಿ ಬೆಳೆ ಡಿಸೆಂಬರ್ ಮೊದಲ ವಾರದ ಅಂತ್ಯದ ವೇಳೆಗೆ ಕಟಾವಾಗಿರುವುದರಿಂದ ಈ ಬೆಳೆಗಳಿಗೆ ನೀರಿನ ಅಗತ್ಯವಿಲ್ಲ.

ಮಟ್ಟೂರು ಮತ್ತು ಭವಾನಿ ಸಾಗರ ಜಲಾಶಯಗಳು 50.367 ಟಿಎಂಸಿ ಗಮನಾರ್ಹ ಸಂಗ್ರಹವನ್ನು ಹೊಂದಿದೆ. ಇದು ತಮಿಳುನಾಡಿಗೆ ಅಗತ್ಯಕ್ಕಿಂತ ಹೆಚ್ಚಾಗಿರುತ್ತದೆ.

ಕರ್ನಾಟಕದ 4 ಜಲಾಶಯಗಳಿಗೆ ಒಳಹರಿವು ಸ್ಥಗಿತಗೊಂಡಿದ್ದು, ಯಾವುದೇ ಒಳಹರಿವಿನ ನಿರೀಕ್ಷೆಗಳಿಲ್ಲ. ಮತ್ತು ಕರ್ನಾಟಕವು ಪ್ರಸ್ತುತ ಬೆಳೆದಿರುವ ಬೆಳಗಳ ಅವಶ್ಯಕತೆ, ಕುಡಿಯುವ ನೀರಿನ ಅಗತ್ಯತೆ ಮತ್ತು ಕೈಗಾರಿಕಾ ಅಗತ್ಯಾಗಳನ್ನು ಈಗಿನ ನೀರಿನ ಸಂಗ್ರಹಯಿಂದ ನಿರ್ವಹಿಸಲು ಬದ್ಧವಾಗಿದೆ.

**ಖರ್ಗೆ ಪ್ರಧಾನಿ ಅಭ್ಯರ್ಥಿಯಾಗಲಿ ಎಂದ ದೀದಿ**

# ಸಂಸದರ ಅಮಾನತಿಗೆ ಖಂಡನೆ, ಡಿ.22 ರಂದು ದೇಶಾದ್ಯಂತ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಪ್ರತಿಪಕ್ಷಗಳ ಮೈತ್ರಿಕೂಟ ಇಂಡಿಯಾದ ಪ್ರಧಾನಿ ಅಭ್ಯರ್ಥಿಯಾಗಲಿ ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮತ್ತು ಟಿಎಂಸಿ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಅವರು ಮಂಗಳವಾರ ಹೇಳಿದ್ದಾರೆ.

ಇಂದು ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ನಡೆದ ಐಓಆಖಂ ಮೈತ್ರಿಕೂಟದ ನಾಲ್ಕನೇ ಸಭೆಯಲ್ಲಿ ಮಮತಾ ಬ್ಯಾನರ್ಜಿ ಅವರು ಖರ್ಗೆ ಪ್ರಧಾನಿ ಅಭ್ಯರ್ಥಿಯಾಗಲಿ ಎಂಬ ಪ್ರಸ್ತಾಪ ಮಾಡಿದರು. ದೆಹಲಿ ಮುಖ್ಯಮಂತ್ರಿ ಮತ್ತು ಆಮ್ ಆದ್ಮಿ ಪಕ್ಷದ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಅವರು ಈ ಪ್ರಸ್ತಾಪಕ್ಕೆ ಬೆಂಬಲ ನೀಡಿದರು.

ಮಮತಾ ಪ್ರಸ್ತಾಪಕ್ಕೆ ಪ್ರತಿಕ್ರಿಯಿಸಿದ ಖರ್ಗೆ ಅವರು, ಲೋಕಸಭೆ ಚುನಾವಣೆಯಲ್ಲಿ ಗೆಲ್ಲುವುದು ಮುಖ್ಯ. ಗೆದ್ದ ನಂತರ ಪ್ರಧಾನಿ ಬಗ್ಗೆ ನಿರ್ಧಾರ ಮಾಡೋಣ ಎಂದು ಹೇಳಿರುವುದಾಗಿ ವರದಿಯಾಗಿದೆ.

ಲೋಕಸಭೆ ಚುನಾವಣೆ ಮುಗಿಯುವವರೆಗೆ ಇಂಡಿಯಾ ಮೈತ್ರಿಕೂಟ ತನ್ನ ಪ್ರಧಾನಿ ಅಭ್ಯರ್ಥಿಯನ್ನು ಘೋಷಿಸುವುದಿಲ್ಲ ಎಂದು ನಿನ್ನೆಯಷ್ಟೇ ಹೇಳಿದ್ದ ಮಮತಾ ಬ್ಯಾನರ್ಜಿ, ಇಂದು ಆ ಸ್ಥಾನಕ್ಕೆ ಕಾಂಗ್ರೆಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಅವರ ಹೆಸರು ಪ್ರಸ್ತಾಪಿಸುವ ಮೂಲಕ ಅಚ್ಚರಿ ಮೂಡಿಸಿದ್ದಾರೆ.

ಇನ್ನು ಇಂಡಿಯಾ ಮೈತ್ರಿಕೂಟ ಸಭೆಯ ಬಳಿಕ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಖರ್ಗೆ ಅವರು, ಇಂಡಿಯಾ ಪ್ರಧಾನಿ ಅಭ್ಯರ್ಥಿಯ ಬಗ್ಗೆ ಇನ್ನೂ ಅಂತಿಮ ನಿರ್ಧಾರ ತೆಗೆದುಕೊಂಡಿಲ್ಲ. ನಮಗೆ ಮೊದಲು ಸಂಸದರು ಗೆಲ್ಲುವುದು ಮುಖ್ಯ. ಸಂಸದರು ಗೆದ್ದು ಬಂದ ಬಳಿಕ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಧಾನಿ ಅಭ್ಯರ್ಥಿಯನ್ನು ಹೇಗೆ ಆಯ್ಕೆ ಮಾಡಿಕೊಳ್ಳಬಹುದು ಎಂಬುದರ ಕುರಿತು ಚರ್ಚಿಸುತ್ತೇವೆ. ಮೊದಲು ಮೈತ್ರಿಕೂಟದ ಸಂಸದರು ಗೆದ್ದು ಬರಲಿ. ಆಮೇಲೆ ನೋಡೋಣ ಎಂದರು. ಸಭೆಯಲ್ಲಿ ಪ್ರತಿಪಕ್ಷಗಳ ಸಂಸದರ ಅಮಾನತನ್ನು ತೀವ್ರವಾಗಿ ಖಂಡಿಸಲಾಯಿತು ಮತ್ತು ಅಮಾನತು ಖಂಡಿಸಿ ಡಿಸೆಂಬರ್ 22 ರಂದು ದೇಶಾದ್ಯಂತ ಪ್ರತಿಭಟನೆ ನಡೆಸಲು ನಿರ್ಧರಿಸಿರುವುದಾಗಿ ಖರ್ಗೆ ತಿಳಿಸಿದರು.

**ತಾಲೂಕಾ ಮಟ್ಟದ ಅಧಿಕಾರಿಗಳನ್ನೊಳಗೊಂಡ ಬರಗಾಲ ಟಾಸ್ಕ್‌ಫೋರ್ಸ್ ಸಭೆ**

# ಬರಗಾಲ ನಿರ್ವಹಣೆಗೆ ಸನ್ನದ್ಧರಾಗಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಟಾಸ್ಕ್‌ಫೋರ್ಸ್ ಸಭೆಯನ್ನು ಅಧಿಕಾರಿಗಳು ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು. ಬರಗಾಲದ ವಸ್ತುಸ್ಥಿತಿ, ಕೈಗೊಂಡ ಪೂರ್ವಸಿದ್ಧತೆ, ಜನರ ಅಗತ್ಯ ಬೇಡಿಕೆಗಳ ಸಂಪೂರ್ಣ ವರದಿಯನ್ನು ತಾಲೂಕಾಡಳಿತ ಆ ಮೂಲಕ ಜಿಲ್ಲಾಡಳಿತಕ್ಕೆ ಸಲ್ಲಿಸಬೇಕಾಗುತ್ತದೆ. ಟಾಸ್ಕ್‌ಫೋರ್ಸ್ ಸಭೆ ಕಾಟಾಚಾರಕ್ಕಾಗಬಾರದು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಮಂಗಳವಾರ ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ನಡೆದ ತಾಲೂಕಾ ಮಟ್ಟದ ಅಧಿಕಾರಿಗಳನ್ನೊಳಗೊಂಡ ಬರಗಾಲ ಟಾಸ್ಕ್‌ಫೋರ್ಸ್ ಸಭೆಯಲ್ಲಿ ಅಧಿಕಾರಿಗಳಿಂದ ಮಾಹಿತಿ ಪಡೆದು ಮಾತನಾಡಿದರು.

ಪಶು ವೈದ್ಯಾಧಿಕಾರಿ ಎನ್.ಎಂ. ಹವಳದ, ತಾಲೂಕಿನಲ್ಲಿ 20 ಸಾವಿರ ಜಾನುವಾರುಗಳಿದ್ದು, ರೈತರ ಬಳಿ ಇನ್ನೂ 12 ವಾರಕ್ಕಾಗುವಷ್ಟು ಮೇವು ಸಂಗ್ರಹಣೆ ಇದೆ ಎಂದು ಮಾಹಿತಿ ನೀಡಿದರು.

ಈ ವೇಳೆ ಬಜಾಜ್ ಇನ್ಸುರೆನ್ಸ್‌ನ ಜಿಲ್ಲಾ ವಿಮಾ ಸಂಯೋಜಕ ಅಮರ್ ಮಾಹಿತಿ ನೀಡಿ, ತಾಲೂಕಿನಲ್ಲಿ 9298 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾದ ಹತ್ತಿ, ಶೇಂಗಾ, ಈರುಳ್ಳಿ, ಮೆಕ್ಕೆಜೋಳ ಬೆಳೆಗಳಿಗೆ ವಿಮಾ ಪಾವತಿಸಿದ 8395 ರೈತ ಫಲಾನುಭವಿಗಳಿಗೆ ಈಗಾಗಲೇ 8.87 ಕೋಟಿ ರೂ. ವಿಮೆ ಹಣ ಜಮೆಯಾಗಿರುವುದು ಸಂತಸದ ಸಂಗತಿ. ತಾಲೂಕಿನಲ್ಲಿ ಇಷ್ಟೊಂದು ಪ್ರಮಾಣದ ರೈತರಿಗೆ ಇದೇ ಮೊದಲ ಬಾರಿ ದೊಡ್ಡ ಮೊತ್ತದ ಬೆಳೆವಿಮೆ ಜಮೆ ಆಗಿದೆ. ಎಫ್‌ಐಡಿ, ಎನ್‌ಪಿಸಿ ಇಲ್ಲದಿರುವುದು ಸೇರಿ ಕೆಲ ತಾಂತ್ರಿಕ ಕಾರಣದಿಂದ 18 ಲಕ್ಷ ರೂ. ಹಣ ಬಾಕಿ ಉಳಿದಿದೆ ಎಂದು ಮಾಹಿತಿ ನೀಡಿದರು.



ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ ಅಭಿಯಂತರ ಸಂತೋಷ ಮಾಹಿತಿ ನೀಡಿ, ಗ್ರಾಮೀಣ ಪ್ರದೇಶದಲ್ಲಿ ತುಂಗಭದ್ರಾ ನದಿಯಿಂದ ನೀರು ಸರಬರಾಜಾಗುತ್ತಿದ್ದು ಅಗತ್ಯಕ್ಕನುಗುಣವಾಗಿ ಹೊಸ ಕೊಳವೆ ಬಾವಿ ಕೊರೆಸಲು ಸಿದ್ಧತೆ ಕೈಗೊಳ್ಳಲಾಗಿದೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಶಾಸಕರು, ಬೇಸಿಗೆ ಕಾಲದಲ್ಲಿ ಗ್ರಾಮೀಣ ಪ್ರದೇಶದ ಜನರಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮುಂಜಾಗ್ರತಾ ಕ್ರಮವಾಗಿ ಹೊಸ ಕೊಳವೆ ಬಾವಿ ಕೊರೆಸಲು ಮುಂದಾಗಬೇಕು ಮತ್ತು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸರಿಪಡಿಸಬೇಕು ಎಂದು ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಈ ವೇಳೆ ತಹಸೀಲ್ದಾರ ವಾಸುದೇವ ಸ್ವಾಮಿ, ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ, ತಾ.ಪಂ ಕಾರ್ಯ ನಿರ್ವಾಹಕಾಧಿಕಾರಿ ಕೃಷ್ಣ ಧರ್ಮರ, ಪುರಸಭೆ ಮುಖ್ಯಾಧಿಕಾರಿ ಶಂಕರ ಹುಲ್ಲಮ್ಮನವರ, ಕೃಷಿ ಸಹಾಯಕ ನಿರ್ದೇಶಕ ರೇವಣಪ್ಪ ಮನಗೂಳಿ, ತೋಟಗಾರಿಕೆ ಇಲಾಖೆ ಅಧಿಕಾರಿ ಸುರೇಶ ಕುಂಬಾರ, ಪುರಸಭೆ ಇಂಜಿನಿಯರ್ ಜಗದೀಶ ಉಳ್ಳಟ್ಟಿ, ಪ್ರಶಾಂತ ಕಿಮಾಯಿ, ಪಶು ವೈದ್ಯಾಧಿಕಾರಿ, ಎಪಿಎಂಸಿ ಕಾರ್ಯದರ್ಶಿ ಶಿವಾನಂದ ಗಂಗಾಧರಮಠ, ರೇಣುಕಾ ಹರಿಜನ, ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆ ಅಧಿಕಾರಿ ಮಾರುತಿ ನಾಯಕ ಮುಂತಾವದರಿದ್ದರು.

> ಪಟ್ಟಣ ಪ್ರದೇಶ ಸೇರಿ ಪ್ರತಿ ಗ್ರಾ.ಪಂ ವ್ಯಾಪ್ತಿಯಲ್ಲಿ ಮೇವು ಸಂಗ್ರಹ ಮಾಡಲು ಜಾಗ ಗುರುತಿಸಿ ಸಿದ್ಧತೆ ಮಾಡಬೇಕು. ಶೆಟ್ಟಿಕೇರಿ, ಬಾಲೆಹೊಸೂರ ಕೆರೆಯಂಚಿನಲ್ಲಿ ಗೋಶಾಲೆ ಆರಂಭಕ್ಕೆ ಪೂರ್ವ ಸಿದ್ಧತೆ ಮಾಡಿಕೊಳ್ಳಬೇಕು. ವಿವಿಧ ಇಲಾಖೆಗಳ ಸಚಿವರು, ಹಿರಿಯ ಅಧಿಕಾರಿಗಳನ್ನು ಸಂಪರ್ಕಿಸಿ ಕ್ಷೇತ್ರಕ್ಕೆ ಅನುದಾನ ಕಲ್ಪಿಸುವ ಕುರಿತು ಚರ್ಚಿಸಿದ್ದೇನೆ. ರಾಜ್ಯ ಸರ್ಕಾರ ಯಾವುದೇ ಕ್ಷಣದಲ್ಲಿ ಬರ ಪರಿಹಾರ ಕಾರ್ಯಯೋಜನೆಗಳನ್ನು ರೂಪಿಸಬಹುದಾಗಿದೆ. ಎಲ್ಲ ಅಧಿಕಾರಿಗಳು ಬರಗಾಲ ನಿರ್ವಹಣೆಗೆ ಸನ್ನದ್ಧರಾಗಿರಿ.
>
> **– ಡಾ. ಚಂದ್ರು ಲಮಾಣಿ.**
> ಶಾಸಕರು, ಶಿರಹಟ್ಟಿ.

# ಮಂಜು ಸಂಸ್ಥೆಯ ಕಾರ್ಯ ಶ್ಲಾಘನೀಯ



■ ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಮಂಜು ಶಿಕ್ಷಣ ಸಂಸ್ಥೆಯಲ್ಲಿ 'ವಿಶ್ವ ಅಂಗವಿಕಲರ ದಿನಾಚರಣೆ'ಯ ನಿಮಿತ್ತ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿದ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಸಂಘದ ನೋಂದಣಿ ಪ್ರಮಾಣಪತ್ರವನ್ನು ಬಿಡುಗಡೆಗೊಳಿಸಿ ಮಾತನಾಡಿ, ವಿಕಲಚೇತನರಿಗೆ ಸರಕಾರದಿಂದ ಸಿಗುವ ಸೌಲಭ್ಯ, ಸಾಧನ-ಸಲಕರಣೆಗಳನ್ನು ನೀಡುವುದಾಗಿ ಭರವಸೆ ನೀಡಿದರಲ್ಲದೆ, ಬೆಟಗೇರಿ ಬುದ್ಧಿಮಾಂದ್ಯ ಮಕ್ಕಳ ಸೇವೆ ಮಾಡುತ್ತಿರುವ ಮಂಜು ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಶಂಕರಸಿಂಗ ರಜಪೂತ ಅವರ ಸೇವೆ ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ಶಂಕರಸಿಂಗ ರಜಪೂತ ಸೇರಿದಂತೆ ವಿವಿಧ ಸಾಧಕರನ್ನು ಸನ್ಮಾನಿಸಲಾಯಿತು. ವೀರೇಂದ್ರ ಸಿಂಗ ರಜಪೂತ ಕಾರ್ಯಕ್ರಮ ನಿರೂಪಿಸಿದರು. ನಗರಸಭಾ ಸದಸ್ಯೆ ಶಕುಂತಲಾ ಅಕ್ಕಿ, ನಗರಸಭಾ ಮಾಜಿ ಸದಸ್ಯ ಮಂಜುನಾಥ ಎಚ್.ಮುಳಗುಂದ, ಸೂರಜ ಜಮಾದಾರ, ಸುನೀತಾ ರೋಣದ, ವೆಂಕಟೇಶ ಭಜಂತ್ರಿ, ಮಹಮ್ಮದ ಶಾಲಗಾರ, ಲಕ್ಷ್ಮಣ ಭಜಂತ್ರಿ, ಹೊಳೆಬಸಪ್ಪ ಅಕ್ಕಿ, ಗಣೇಶ ಮಿಠಡೆ, ಸಿದ್ದಣ್ಣ ಮೇಳಣ್ಣವರ, ಸತೀಶ ಮಾಳೋದೆ, ನಾಸೀರ, ರಾಘವೇಂದ್ರ ಮಿಶೆಣ್ಣವರ, ವಾಸುದೇವ ಹುಣಸೀಮರದ, ಮಹಾದೇವಪ್ಪ ಬಂಕಾಪೂರ, ಕೊಟ್ರೇಶ, ಎಮ್‌ಆರ್‌ಡಬ್ಲ್ಯೂ, ವಿಆರ್‌ಡಬ್ಲ್ಯೂ, 4ನೇ ವಾರ್ಡಿನ ನಾಗರಿಕರು ಉಪಸ್ಥಿತರಿದ್ದರು.

**6ನೇ ಶರಣ ಸಂಸ್ಕತಿ ಉತ್ಸವ, ವಚನ ಗ್ರಂಥ ಮಹಾರಥೋತ್ಸವದ ಪೂರ್ವಭಾವಿ ಸಭೆ**

# ಅಂಬಿಗ ಸಮಾಜ ಬಾಂಧವರು ಸಂಘಟಿತರಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

2024ರ ಜನವರಿ 14, 15ರಂದು ಜರುಗುವ ಶರಣ ಸಂಸ್ಕೃತಿ ಉತ್ಸವ ಹಾಗೂ ವಚನ ಗ್ರಂಥ ಮಹಾರಥೋತ್ಸವ ಕಾರ್ಯಕ್ರಮಗಳಿಗೆ ಗದಗ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಸಮಾಜ ಬಾಂಧವರು ಆಗಮಿಸಿ ಸಂಘಟಿತರಾಗಿ, ಗುರುಪೀಠದಿಂದ ಜರುಗುವ ಸಮಾಜಮುಖಿ ಕಾರ್ಯಗಳನ್ನು ಯಶಸ್ವಿಗೊಳಿಸಬೇಕೆಂದು ಪೂಜ್ಯ ಶ್ರೀ ಶಾಂತಭೀಷ್ಮ ಚೌಡಯ್ಯ ಮಹಾಸ್ವಾಮಿಗಳು ಕರೆ ನೀಡಿದರು.

ಹಾವೇರಿ ಜಿಲ್ಲೆಯ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಗುರುಪೀಠ ಸುಕ್ಷೇತ್ರ ನರಸೀಪುರದಲ್ಲಿ ಜರುಗುವ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ 6ನೇ ಶರಣ ಸಂಸ್ಕೃತಿ ಉತ್ಸವ ಹಾಗೂ ವಚನ ಗ್ರಂಥ ಮಹಾರಥೋತ್ಸವದ ನಿಮಿತ್ತ ಗದಗ ಜಿಲ್ಲೆ ನಿಜಶರಣ ಅಂಬಿಗರ ಚೌಡಯ್ಯನವರ ವಿವಿದೋದ್ದೇಶಗಳ ಸೇವಾ ಟ್ರಸ್ಟ್ ಹಾಗೂ ಶ್ರೀ ಉಡಚಮ್ಮದೇವಿ ಯವಕ ಸಂಘದ ವತಿಯಿಂದ ನಗರದ ಉಡಚಮ್ಮದೇವಿ ದೇವಸ್ಥಾನ ಆವರಣದಲ್ಲಿ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಶ್ರೀಗಳು ಮಾತನಾಡಿದರು.



ಪ್ರಾಸ್ತಾವಿಕವಾಗಿ ಗದಗ ಜಿಲ್ಲಾ ನಿಜಶರಣ ಅಂಬಿಗರ ಚೌಡಯ್ಯನವರ ವಿವಿಧೋದ್ದೇಶ ಸೇವಾ ಟ್ರಸ್ಟಿನ ಅಧ್ಯಕ್ಷ ಬಿ.ಎನ್. ಯರನಾಳ ಮಾತನಾಡಿ, ಗದಗ ಜಿಲ್ಲೆಯಲ್ಲಿ ಟ್ರಸ್ಟಿನ ವತಿಯಿಂದ ನಿರ್ವಾಣಗೊಳ್ಳುತ್ತಿರುವ ಸಮುದಾಯ ಭವನದ ಕಾಮಗಾರಿ ವಿವರವನ್ನು ತಿಳಿಸಿ, ಗುರುಪೀಠದಲ್ಲಿ ಜರುಗುವ ಶರಣ ಸಂಸ್ಕೃತಿ ಉತ್ಸವ ಕಾರ್ಯಕ್ರಮಕ್ಕೆ ಜಿಲ್ಲೆಯ ವತಿಯಿಂದ ಸಂಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದರು.

ವೇದಿಕೆಯ ಮೇಲೆ ಉಪಸ್ಥಿತರಿದ್ದ ಗುರುಪೀಠದ ಉಪಾಧ್ಯಕ್ಷ ಟಿ.ಮಂಜನಾಥ, ಗುರುಪೀಠದ ನಿರ್ದೇಶಕ ಗುರಪ್ಪ ಆದೆಪ್ಪನವರ ಮಾತನಾಡಿದರು. ಶರಣ ಸಂಸ್ಕೃತಿ ಉತ್ಸವ ಹಾಗೂ ವಚನ ಗ್ರಂಥ ಮಹಾರಥೋತ್ಸವ ಪ್ರಚಾರದ ಭಿತ್ತಿಪತ್ರ, ಕರಪತ್ರಗಳನ್ನು ಬಿಡುಗಡೆಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ಟ್ರಸ್ಟಿನ ಪದಾಧಿಕಾರಿಗಳಾದ ವಿ.ಜಿ. ಬಾರಕೇರ, ಕಾಶಪ್ಪ ಬಳಗಾನೂರ, ಮಾಲತೇಶ ಬಾರ್ಕಿ, ಪರಶುರಾಮ ಬಾರಕೇರ, ಶರಣಪ್ಪ ಬಾರಕೇರ, ಬಸವರಾಜ ಬಾರಕೇರ, ಶಿವಾನಂದ ಬನಹಟ್ಟಿ, ಸಿ.ಬಿ. ಬಾರಕೇರ, ಗುರಪ್ಪ ಆದೆಪ್ಪನವರ, ಪರಶುರಾಮ ಓಲೇಕಾರ, ಸಮಾಜ ಬಾಂಧವರಾದ ಹುಲ್ಲಪ್ಪ ಬಾರಕೇರ, ಯಲ್ಲಪ್ಪ ಬಾರಕೇರ, ಬೂದೀಶ ಹೊಂಬಳ, ಮುಳ್ಳಳ್ಳಿ, ಎಣ್ಣಿ, ಲಕ್ಷ್ಮಣ ಕಾಗನೂರ, ವಾಸುದೇವ ಲಕ್ಷ್ಮೇಶ್ವರ, ಪ್ರಕಾಶ ಪೂಜಾರ, ರವಿ ಸವಣೂರ, ಗೋಪಾಲ ಲಕ್ಷ್ಮೇಶ್ವರ, ಚಂದ್ರಶೇಖರ ಸವಣೂರ, ಮಧುಶೇಖರ ಪೂಜಾರ, ರಾಮು ಲಕ್ಷ್ಮೇಶ್ವರ, ಪರಶುರಾಮ ಪೂಜಾರ, ವಿವೇಕ ಲಕ್ಷ್ಮೇಶ್ವರ, ಜಗದೀಶ ಪೂಜಾರ, ರಮೇಶ ಲಕ್ಷ್ಮೇಶ್ವರ, ಪರಶುರಾಮ ಪೂಜಾರ, ಹೆಚ್.ಬಿ. ಆದೆಪ್ಪನವರ, ಕಾಳಪ್ಪ ನಾಗನೂರ, ಮಾದನಗೌಡ ಪಾಟೀಲ, ಕೃಷ್ಣಗೌಡ ಸಣ್ಣಮನಿ, ನಿಂಗಪ್ಪ ಬಾರಕೇರ ಉಪಸ್ಥಿತರಿದ್ದರು. ಮಂಜುನಾಥ ಸುಣಗಾರ ಕಾರ್ಯಕ್ರಮ ನಿರೂಪಿಸಿದರು. ಕಿರಣಕುಮಾರ ಪೂಜಾರ ವಂದಿಸಿದರು.

> ಗದಗ ಜಿಲ್ಲಾ ನಿಜಶರಣ ಅಂಬಿಗರ ಚೌಡಯ್ಯನವರ ಸೇವಾ ಟ್ರಸ್ಟಿನ ಉಪಾಧ್ಯಕ್ಷ ಸಿ.ಬಿ. ಬಾರಕೇರ ಮಾತನಾಡಿ, ಅಂಬಿಗ ಸಮಾಜದ ಏಕೈಕ ಗುರುಪೀಠವಾದ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಗುರುಪೀಠದ ವತಿಯಿಂದ ಜರುಗುವ ಮಹಾರಥೋತ್ಸವದ ಕಾರ್ಯಕ್ರಮಕ್ಕೆ ತನು-ಮನ-ಧನದಿಂದ ಸಂಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದರು.

# ವರಸಿದ್ಧಿ ವಿನಾಯಕ ದೇವಸ್ಥಾನದಲ್ಲಿ ಕಾರ್ತಿಕೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ನರಸಾಪೂರ ಗ್ರಾಮದ ಖಾದಿ ನಗರದ ವರಸಿದ್ಧಿ ವಿನಾಯಕ ದೇವಸ್ಥಾನದಲ್ಲಿ ಮಂಗಳವಾರ ಕಾರ್ತಿಕೋತ್ಸವ ಜರುಗಿತು.

ನಾಗರಿಕ ಹಿತರಕ್ಷಣಾ ಸಮಿತಿಯ ಪದಾಧಿಕಾರಿಗಳು, ಸ್ಥಳೀಯ ನಿವಾಸಿಗಳು ಭಕ್ತಿಯಿಂದ ದೀಪ ಹಚ್ಚುವ ಮೂಲಕ ಕಾರ್ತಿಕೋತ್ಸವ ಆಚರಿಸಿದರು.



ನಾಗರಿಕ ಹಿತರಕ್ಷಣಾ ಸಮಿತಿ ಅಧ್ಯಕ್ಷ ಕೆ.ಎಸ್. ಹಿರೇಮಠ, ಪ್ರಧಾನ ಕಾರ್ಯದರ್ಶಿ ಸಿ.ವಿ. ಪವಾಡಶೆಟ್ಟರ, ಉಪಾಧ್ಯಕ್ಷ ಎಸ್.ವಿ. ಗುರ್ಲಹೊಸೂರ, ಜಯರಾಮಪ್ಪ ನೆಗಳೂರ, ಶಾರದಾ ಬೀಳಗಿ, ಶೋಭಾ ಹಿರೇಮಠ, ಲಕ್ಷ್ಮೀಬಾಯಿ ರಜಪೂತ, ಲತಾ ಹಲಗತ್ತಿ ಮುಂತಾದವರಿದ್ದರು.

# ಮನದ ಕತ್ತಲೆ ಕಳೆಯುವುದೇ ಕಾರ್ತಿಕ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ದೀಪವು ಜ್ಞಾನದ ಸಂಕೇತವಾಗಿದ್ದು, ಅಜ್ಞಾನವನ್ನು ಕಳೆಯಲು ನಾವೆಲ್ಲರೂ ಜ್ಞಾನ, ವೈಚಾರಿಕತೆ, ಸಮಾನತೆ ಎಂಬ ದೀಪವನ್ನು ಹಚ್ಚಬೇಕು ಎಂದು ಗವಿಮಠದ ಮಲ್ಲಿಕಾರ್ಜುನ ಮಾಹಾಸ್ವಾಮಿಜಿ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿ ಗವಿಮಠದ ಕಾರ್ತಿಕೋತ್ಸವ ಕಾರ್ಯಕ್ರಮದ ಸಾನ್ನಿದ್ಯ ವಹಿಸಿ ಮಾತನಾಡಿ, ಮನದ ಕತ್ತಲೆ ಕಳೆಯುವುದೇ ನಿಜವಾದ ಕಾರ್ತಿಕ. ದೀಪ ಕತ್ತಲೆಯನ್ನು ಕಳೆದಂತೆ ಬಸವಾದಿ ಶರಣರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಜ್ಞಾನದ ಬೆಳಕನ್ನು ಹಚ್ಚಬೇಕು ಎಂದರು.

ನೀಲಗುಂದ ಗುದ್ನೇಶ್ವರ 'ಮಠದ ಪರಭುಲಿಂಗ ದೇವರು, ಜಾತ್ರಾ ಸಮಿತಿ ಅಧ್ಯಕ್ಷ ಎಂ.ಡಿ. ಬಟ್ಟೂರ, ಡಾ. ಎಸ್.ಸಿ. ಚವಡಿ, ಶಿವಬಸವ ಹಸಬಿ, ವಿ.ವಿ. ವಾಲಿ, ರಾಮಣ್ಣಾ ಕಮಾಜಿ, ಕೆ.ಎಲ್. ಕರಿಗೌಡರ, ಎಸ್.ಸಿ. ಬಡ್ನಿ, ಪಿ.ಎ. ವಂಟಕರ, ಮಾಹಾಂತೇಶ ಕೋರಿ, ನಾಗಪ್ಪ ನೀಲಗುಂದ, ವಿಜಯ ನೀಲಗುಂದ, ಎಸ್.ಎಂ. ಉಜ್ಜಣ್ಣವರ, ಪ್ರಕಾಶ ಮದ್ದಿನ, ಮಂಜುನಾಥ ಮಟ್ಟಿ, ಶಿವಾನಂದ ಆಪ್ತಗೇರಿ ಸೇರಿದಂತೆ ಭಕ್ತಾದಿಗಳಿದ್ದರು.

**ಕೋವಿಡ್ ಪ್ರಕರಣಗಳ ಹೆಚ್ಚಳ**

# ಡಿ. 20ರಂದು ಕೇಂದ್ರ ಆರೋಗ್ಯ ಸಚಿವರಿಂದ ಪರಿಶೀಲನಾ ಸಭೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೇಶದಲ್ಲಿ ಕೋವಿಡ್-19 ಪ್ರಕರಣಗಳ ಹೆಚ್ಚಳದ ಮಧ್ಯೆ, ಕೇಂದ್ರ ಆರೋಗ್ಯ ಸಚಿವ ಮನ್ಸುಖ್ ಮಾಂಡವಿಯಾ ಅವರು ಡಿಸೆಂಬರ್ 20ರಂದು ಆರೋಗ್ಯ ಸೌಲಭ್ಯಗಳು ಮತ್ತು ಸೇವೆಗಳ ಪರಿಶೀಲನಾ ಸಿದ್ಧತೆ ಸಭೆಯನ್ನು ನಡೆಸಲಿದ್ದಾರೆ.

ಮನ್ಸುಖ್ ಮಾಂಡವಿಯಾ ಅವರು ಆರೋಗ್ಯ ಸಚಿವರು ಮತ್ತು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ (UTs) ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು (ಆರೋಗ್ಯ) ಮತ್ತು ಕೇಂದ್ರ ಸಚಿವಾಲಯಗಳು ಮತ್ತು ಇಲಾಖೆಗಳ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ವಾಸ್ತವಿಕವಾಗಿ ಪರಿಶೀಲನಾ ಸಭೆಯನ್ನು ನಡೆಸಲಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಭಾರತದಲ್ಲಿ ಉಸಿರಾಟದ ಕಾಯಿಲೆಯ ಪ್ರಕರಣಗಳಲ್ಲಿ ಏರಿಕೆ ಮತ್ತು COVID-19 ಪ್ರಕರಣಗಳಲ್ಲಿ ಹೆಚ್ಚಳವಾಗುತ್ತಿರುವುದರಿಂದ ಮೇಲ್ವಿಚಾರಣೆ ಮಾಡಲು ಮತ್ತು ಜಾಗರೂಕರಾಗಿರಲು ಕೇಂದ್ರವು ಸೋಮವಾರ ರಾಜ್ಯಗಳಿಗೆ ಮಾರ್ಗಸೂಚಿಗಳನ್ನು ನೀಡಿತ್ತು. ದೇಶದಲ್ಲಿ ಕೋವಿಡ್ ನ ಹೊಸ ಜೆಎನ್.1 ರೂಪಾಂತರದ ಮೊದಲ ಪ್ರಕರಣ ಕೇರಳದಲ್ಲಿ ಪತ್ತೆಯಾಗಿತ್ತು. ಹೊಸ ರೂಪಾಂತರವು ಅನೇಕ ದೇಶಗಳಲ್ಲಿ, ವಿಶೇಷವಾಗಿ ಅಮೇರಿಕಾ, ಸಿಂಗಾಪುರ್ ಮತ್ತು ಚೀನಾದಲ್ಲಿ ಉಲ್ಬಣಗೊಳ್ಳುತ್ತಿದೆ.

ಕೆಲವು ದಕ್ಷಿಣದ ರಾಜ್ಯಗಳಲ್ಲಿ, ವಿಶೇಷವಾಗಿ ಕೇರಳದಲ್ಲಿ ಪ್ರಕರಣಗಳು ಹೆಚ್ಚಾಗುತ್ತಿರುವುದರಿಂದ, ಒಂದು ಸಾವು ಸಹ ವರದಿಯಾಗಿದೆ. ಇನ್ಫ್ಲುಯೆನ್ಸ-ಲೈಕ್ ಇಲ್ನೆಸ್ (ILI) ಮತ್ತು ಉಸಿರಾಟದ ಕಾಯಿಲೆಗಳ ಇತ್ತೀಚಿನ ಏರಿಕೆಯಿಂದಾಗಿ ಆರೋಗ್ಯ ಸೌಲಭ್ಯಗಳು ಮತ್ತು ಸೇವೆಗಳ ಪ್ರತಿಕ್ರಿಯೆಯ ಸಿದ್ಧತೆಯನ್ನು ಸಚಿವರು ಪರಿಶೀಲಿಸುತ್ತಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕೆಲವು ರಾಜ್ಯಗಳಲ್ಲಿ ಕೋವಿಡ್ ಸೇರಿದಂತೆ ತೀವ್ರತರವಾದ ಉಸಿರಾಟದ ಕಾಯಿಲೆ (SARI) ಸಹ ಹೆಚ್ಚಾಗುತ್ತಿದೆ.

ಆರೋಗ್ಯ ಸಚಿವರು ವೈದ್ಯಕೀಯ ಆಮ್ಲಜನಕ, ಆಸ್ಪತ್ರೆ ಹಾಸಿಗೆಗಳು, ವೆಂಟಿಲೇಟರ್‌ಗಳು, ಔಷಧಗಳು, ರೋಗನಿರ್ಣಯ ಮತ್ತು ಉಲ್ಲೇಖಿತ ಸಾರಿಗೆ ಮತ್ತು ILI/SARI ಕಣ್ಗಾವಲು ಕ್ರಮಗಳ ಲಭ್ಯತೆಯ ಸ್ಥಿತಿಯ ಮಾಹಿತಿಯನ್ನು ತೆಗೆದುಕೊಳ್ಳುತ್ತಾರೆ.

# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಸಿಬ್ಬಂದಿ ಕೊರತೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬಿಡಿಎಗೆ ಕಳೆದ ಬಾರಿ ಸಿಬ್ಬಂದಿಗಳ ನೇರ ನೇಮಕಾತಿ ನಡೆದಿದ್ದು 1996 ರಲ್ಲಿ. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಕೆಲಸಗಳು ಹಲವು ಪಟ್ಟು ಹೆಚ್ಚಿವೆ, ಆದರೆ ಕಳೆದ 27 ವರ್ಷಗಳಲ್ಲಿ ಯಾವುದೇ ಹೆಚ್ಚುವರಿ ಸಿಬ್ಬಂದಿಯನ್ನು ನೇಮಕ ಮಾಡಲಾಗಿಲ್ಲ ಎಂದು ಅನೇಕ ಅಧಿಕಾರಿಗಳು ಹೇಳಿದ್ದಾರೆ. ಯೋಜನೆಗಳು ಮತ್ತು ಕಡತಗಳು ಆಮೆಗತಿಯಲ್ಲಿ ಸಾಗುತ್ತಿದ್ದು ಸಾರ್ವಜನಿಕರ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka